ಸಂಪುಟ : 10 ಸಂಚಿಕೆ: 159 ಪುಟ : 4+2 ಬೆಲೆ: 3.00 ಮಂಗಳವಾರ ಜುಲೈ 29 2025 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 10 Issue : 159 Pages : 4+2 Price : 3.00 Tuesday July 29 2025 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

### ಅವಳಿ ನಗರಕ್ಕೆ ನೀರು ಸರಬರಾಜು ಕುರಿತಂತೆ ಜರುಗಿದ ಸಭೆಯಲ್ಲಿ ಸಚಿವ ಎಚ್.ಕೆ. ಪಾಟೀಲ

# ಮೂರು ದಿನಕ್ಕೊಮ್ಮೆ ನೀರು ಪೂರೈಕೆಯಾಗಲಿ



■ ವಿಜಯಸಾಕ್ಷಿ ಸುದ್ದಿ, ಗದಗ

ಗದಗ-ಬೆಟಗೇರಿ ಅವಳಿ ನಗರದ ಸಾರ್ವಜನಿಕರಿಗೆ ಸಮರ್ಪಕ ನೀರು ಪೂರೈಸಲು ಆದ್ಯತೆ ವಹಿಸಬೇಕು. ಪ್ರತಿ ಮೂರು ದಿನಕ್ಕೊಮ್ಮೆ ನೀರು ಪೂರೈಕೆ ಆಗಬೇಕು ಎಂದು ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ. ಪಾಟೀಲ ಸೂಚನೆ ನೀಡಿದರು.

ಗದಗ ಜಿಲ್ಲಾಡಳಿತ ಭವನದ ಸಭಾಂಗಣದಲ್ಲಿ ಸೋಮವಾರ ಗದಗ-ಬೆಟಗೇರಿ ಅವಳಿ ನಗರಕ್ಕೆ ನೀರು ಸರಬರಾಜು ಕುರಿತಂತೆ ಜರುಗಿದ ಸಭೆಯ ಅಧ್ಯಕ್ಷತೆ ವಹಿಸಿ ಅವರು ನಿರ್ದೇಶನ ನೀಡಿದರು.

> ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ಮಾತನಾಡಿ, ಮೊದಲು ದಿಬ್ಬದಲ್ಲಿರುವ ಮನೆಗಳಿಗೆ ನೀರಿನ ಪೂರೈಕೆ ಮಾಡಬೇಕು. ನಂತರದಲ್ಲಿ ತಗ್ಗು ಪ್ರದೇಶದ ಮನೆಗಳಿಗೆ ನೀರು ಪೂರೈಕೆ ಆಗುವಂತೆ ನಿಗಾ ವಹಿಸಬೇಕು ಎಂದು ಹೇಳಿದರು.

ಅಗತ್ಯ ಮೂಲಭೂತ ಸೌಲಭ್ಯಗಳಲ್ಲಿ ಒಂದಾದ ನೀರು ಸರಬರಾಜು ಮಾಡಲು ಪ್ರಥಮಾದ್ಯತೆ ನೀಡಬೇಕು. ವಿನಾಕಾರಣ ನೀರಿನ ಅಪವ್ಯಯವನ್ನು ತಡೆದು ಅಗತ್ಯವಿರುವಲ್ಲಿ ನೀರು ಪೂರೈಕೆ ಮಾಡಲು ಅಧಿಕಾರಿ ವರ್ಗ ಕ್ರಮ ಕೈಗೊಳ್ಳಬೇಕು. ಪ್ರತಿ ದಿನ ರಾತ್ರಿ ನದಿಯಿಂದ ಜಾಕ್‌ವೆಲ್ ಮೂಲಕ ನೀರನ್ನು ಟ್ಯಾಂಕುನಲ್ಲಿ ಸಂಗ್ರಹಿಸಿ, ಮುಂಜಾನೆ ವಾರ್ಡ್‌ವಾರು ನೀರು ಪೂರೈಕೆಗೆ ವಾಲ್‌ಮನ್‌ಗಳು ಮುಂದಾಗಬೇಕು ಎಂದು ಸೂಚಿಸಿದರು. ನಗರಸಭೆಯಿಂದ ಸದ್ಯ ಕಾರ್ಯನಿರ್ವಹಿಸುತ್ತಿರುವ ವಾಲ್‌ಮನ್‌ಗಳು, ಸೂಪರ್ ವೈಸರ್‌ಗಳನ್ನು ಬದಲಾವಣೆ ಮಾಡಬೇಕು. ಅವರಿಗೆ ಪ್ರತ್ಯೇಕ ಬೀದಿ, ವಾರ್ಡ್‌ಗಳ ಮರುಹಂಚಿಕೆ ಮಾಡಿ ಸಮರ್ಪಕ ನೀರು ಪೂರೈಕೆಗೆ ಕ್ರಮ ಕೈಗೊಳ್ಳಬೇಕು. ಈ ಬಗ್ಗೆ ನಗರಸಭೆ ಪೌರಾಯುಕ್ತರು ಮುಂದಾಗಬೇಕು ಎಂದು ಸಚಿವರು ಸೂಚನೆ ನೀಡಿದರು. ಅವಳಿ ನಗರಕ್ಕೆ ನೀರು ಪೂರೈಕೆಗಾಗಿಯೇ ಓರ್ವ ಪ್ರತ್ಯೇಕ ಇಂಜಿನಿಯರ್ ನೇಮಕ ಮಾಡಿ ನೀರು ಪೂರೈಕೆ ಸರಳೀಕರಣಗೊಳಿಸಬೇಕು.

ಅಲ್ಲದೆ ಪೈಪ್, ವಾಲ್‌ನಿಂದ ಪೋಲಾಗುವ ನೀರನ್ನು ತಡೆಯಲು ಶೀಘ್ರ ದುರಸ್ತಿ ಕಾರ್ಯ ಕೈಗೊಳ್ಳಲು ಸಚಿವ ಎಚ್.ಕೆ. ಪಾಟೀಲ ಸೂಚಿಸಿದರು. ಅವಳಿ ನಗರಕ್ಕೆ ನೀರು ಪೂರೈಕೆ ಕುರಿತಂತೆ ನಗರಸಭೆ ಪೌರಾಯುಕ್ತರು ಕ್ರಿಯಾಶೀಲವಾಗಿ ಕಾರ್ಯನಿರ್ವಹಿಸಬೇಕು.

ಸಮರ್ಪಕ ನೀರು ಪೂರೈಕೆ ಆಗುತ್ತಿರುವ ಬಗ್ಗೆ ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕರು ಮೇಲುಸ್ತುವಾರಿ ಕಾರ್ಯ ನಿರ್ವಹಿಸಬೇಕೆಂದು ತಿಳಿಸಿದರು.



> ನಾವೆಲ್ಲರೂ ನೀರು ಪೂರೈಕೆ ಮಾಡುವ ವಾಲ್‌ಮನ್ ಮೇಲೆ ವಿಶ್ವಾಸವಿಟ್ಟು ಗಮನಿಸೋಣ, ಮುಂದಿನ 100 ದಿವಸದೊಳಗೆ ಸಮರ್ಪಕ ನೀರಿನ ವ್ಯವಸ್ಥೆ ಆಗುವಂತೆ ಅವರು ಕಾರ್ಯನಿರ್ವಹಿಸುವ ವಿಶ್ವಾಸವಿದೆ. ನೀರು ಪೂರೈಕೆ ಕುರಿತಂತೆ ನವಂಬರ್ 1ರಂದು ಮತ್ತೆ ನಾವೆಲ್ಲರೂ ಸೇರೋಣ, ಆಗ ನೀರಿನ ಪೂರೈಕೆ ಸಮಸ್ಯೆ ಸಂಪೂರ್ಣ ನಿವಾರಣೆಯಾಗಿರಬೇಕು.
>
> – ಎಚ್.ಕೆ. ಪಾಟೀಲ.
> ಜಿಲ್ಲಾ ಉಸ್ತುವಾರಿ ಸಚಿವರು.

ಈ ಸಂದರ್ಭದಲ್ಲಿ ಗದಗ-ಬೆಟಗೇರಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕ್ಬರ್‌ಸಾಬ್ ಬಬರ್ಚಿ, ಪ್ರಭು ಬುರಬುರೆ, ಸಿದ್ದು ಪಾಟೀಲ, ಅಶೋಕ ಮಂದಾಲಿ, ಜಿ.ಪಂ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಭರತ್ ಎಸ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ರೋಹನ್ ಜಗದೀಶ್, ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕ ಬಸವನಗೌಡ, ನಗರಸಭೆ ಪೌರಾಯುಕ್ತ ರಾಜಾರಾಮ್ ಪವಾರ್ ಸೇರಿದಂತೆ ನಗರಸಭೆಯ ಅಧಿಕಾರಿಗಳು, ವಾಲ್‌ಮಗಳು ಸೂಪರ್ ವೈಸರ್‌ಗಳು ಉಪಸ್ಥಿತರಿದ್ದರು.

## ಆಕ್ಷೇಪಣೆ ಸಲ್ಲಿಸಲು ಅವಕಾಶ

■ ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲೆಯ ಗಜೇಂದ್ರಗಡ ಪಟ್ಟಣದ ಸಾರ್ವಜನಿಕರಿಗೆ ತಿಳಿಸುವುದೇನೆಂದರೆ ಗಜೇಂದ್ರಗಡ ಪುರಸಭೆ ವ್ಯಾಪ್ತಿಯಲ್ಲಿ ಬರುವ ಪುರಸಭೆ ಮಾಲ್ಕಿ ನಾಗರಿಕ ಸೌಲಭ್ಯಕ್ಕೆ ಕಾಯ್ದಿರಿಸಿದ ರಿ.ಸ.ನಂ. 13/1 ಟಿ.ಎಮ್.ಸಿ.ನಂ. 6721 ಪ್ಲಾಟ್ ನಂ. 98 , ಜಾಗೆಯನ್ನು ರೋಣ ತಾಲೂಕು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಗ ಮಂಜೂರಿಸಲು ಕರ್ನಾಟಕ ಪುರಸಭೆ ಅಧಿನಿಯಮ ಹಾಗೂ ಸರ್ಕಾರದ ಅಧಿಸೂಚನೆ ಪ್ರಕಾರ ಪುರಸಭೆ ಸಾಮಾನ್ಯ ಸಭೆಯಲ್ಲಿ ಜರುಗಿದಂತೆ 30 ವರ್ಷದ ಅವದಿಗೆ ಮೀರದ ಹಾಗೆ ಲೀಸ್ ಆಧಾರದ ಮೇಲೆ ನಿವೇಶನಗಳನ್ನು ಡಿ.ದೇವರಾಜ್ ಅರಸು ಮೆಟ್ರಿಕ್ ನಂತರದ ಬಾಲಕರ ವಿದ್ಯಾರ್ಥಿ ನಿಲಯ, ಗಜೇಂದ್ರಗಡ ಕಟ್ಟಡ ನಿರ್ಮಾಣಕ್ಕಾಗಿ ನಿವೇಶನ ಹಂಚಿಕೆ ಮಾಡಲು ಸಭೆಯಲ್ಲಿ ನಿರ್ಣಯಿಸಲಾಗಿದೆ. ಈ ಕುರಿತು ಯಾರದಾದರೂ ಸಲಹೆ/ ಸೂಚನೆ/ ಆಕ್ಷೇಪಣೆಗಳು ಇದ್ದಲ್ಲಿ ಈ ಪ್ರಕಟಣೆಗೊಂಡ 7 ದಿವಸದೊಳಗಾಗಿ ಲಿಖಿತವಾಗಿ ಗಜೇಂದ್ರಗಡ ಪುರಸಭೆಗೆ ಸಲ್ಲಿಸಲು ಅವಕಾಶ ಕಲ್ಪಿಸಲಾಗಿದೆ. ಹೆಚ್ಚಿನ ಮಾಹಿತಿಗಾಗಿ ಗಜೇಂದ್ರಗಡ ಪುರಸಭೆ ಮುಖ್ಯಾಧಿಕಾರಿಗಳ ಕಾರ್ಯಾಲಯವನ್ನು ಸಂಪರ್ಕಿಸಬಹುದಾಗಿದೆ.

### ಸಚಿವ ಎಚ್.ಕೆ. ಪಾಟೀಲ ಜನ್ಮದಿನಾಚರಣೆ ಅಂಗವಾಗಿ ಸೇವಾ ತಂಡದಿಂದ ವಿಶಿಷ್ಟ ಅಭಿಯಾನ

# 1072 ಜನರಿಂದ ಅಂಗಾಂಗ ದಾನ ಪ್ರತಿಜ್ಞೆ

■ ವಿಜಯಸಾಕ್ಷಿ ಸುದ್ದಿ, ಗದಗ

ಕಾನೂನು, ಪ್ರವಾಸೋದ್ಯಮ, ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ. ಪಾಟೀಲರ 72ನೇ ಜನ್ಮದಿನಾಚರಣೆಯ ನಿಮಿತ್ತ 1072 ಜನರಿಂದ ಅಂಗಾಂಗ ದಾನ ಪ್ರತಿಜ್ಞೆ ಪತ್ರಗಳನ್ನು ಸಂಗ್ರಹಿಸುವ ಅಭಿಯಾನ ಹಮ್ಮಿಕೊಳ್ಳಲಾಗಿದೆ ಎಂದು ಸೇವಾ ತಂಡದ ಅಧ್ಯಕ್ಷ ಪ್ರಭು ಬುರಬುರೆ ಮಾಹಿತಿ ನೀಡಿದರು.

ಸೋಮವಾರ ನಗರದ ಪತ್ರಿಕಾ ಭವನದಲ್ಲಿ ನಡೆದ ಸುದ್ದಿಗೋಷ್ಠಿಯನ್ನುದ್ದೇಶಿಸಿ ಮಾತನಾಡಿದ ಅವರು, ಸಾಮಾಜಿಕ ಸೇವೆಗಳಲ್ಲಿ ಸಕ್ರಿಯವಾಗಿ ತೊಡಗಿಸಿಕೊಂಡಿರುವ ಎಚ್.ಕೆ. ಪಾಟೀಲ ಸೇವಾ ತಂಡವು ಎಚ್.ಕೆ. ಪಾಟೀಲರ 72ನೇ ಜನ್ಮದಿನಾಚರಣೆಯನ್ನು ಅರ್ಥಪೂರ್ಣವಾಗಿ ಆಚರಿಸುವ ಉದ್ದೇಶದೊಂದಿಗೆ ಈ ಅಭಿಯಾನ ನಡೆಸುತ್ತಿದೆ ಎಂದರು.

ಈ ಅಭಿಯಾನವು ಸೇವಾ ತಂಡದ ಅತ್ಯಂತ ಶ್ರೇಷ್ಠ ಕೆಲಸಗಳಲ್ಲಿ ಒಂದಾಗಿದೆ. ಅಂಗಾಂಗ ದಾನಕ್ಕೆ



ಯಾವುದೇ ರೀತಿಯ ಒತ್ತಾಯವಿಲ್ಲ. ಯಾರಾದರು ಪ್ರತಿಜ್ಞೆ ಮಾಡಿದರೂ, ಕುಟುಂಬದವರ ಒಪ್ಪಿಗೆ ಇಲ್ಲದೆ ಅಂಗಾಂಗಗಳನ್ನು ತೆಗೆದುಕೊಳ್ಳುವುದಿಲ್ಲ ಎಂದು ಸ್ಪಷ್ಟಪಡಿಸಿದರು.

ಇದಕ್ಕೂ ಮೊದಲು, ನೋಂದಣಿ ಇಲ್ಲದೆ ಸೇವೆ ಮಾಡುತ್ತಿದ್ದ ಎಚ್.ಕೆ. ಪಾಟೀಲ ಸೇವಾ ತಂಡ ಈಗ ಅಧಿಕೃತವಾಗಿ ನೋಂದಣಿಯಾಗಿದ್ದು, ಸಾಮಾಜಿಕ ಸೇವೆಗಳನ್ನು ನಿರಂತರವಾಗಿ ಮುಂದುವರೆಸಿಕೊಂಡು ಬಂದಿದೆ ಎಂದರು.

ಈ ಸಂದರ್ಭದಲ್ಲಿ ಡಾ. ಪ್ಯಾರ ಅಲಿ ನೂರಾನಿ, ಬಿ.ಬಿ. ಅಸೂಟಿ, ಅಶೋಕ ಮಂದಾಲಿ, ಬಸವರಾಜ ಕಡೇಮನಿ, ವಿನೋದ ಶಿದ್ಲಿಂಗ್, ರಮೇಶ ಹೊನ್ನಿನಾಯ್ಕರ, ಎಂ.ಸಿ. ಶೇಖ್ ಮುಂತಾದ ಪ್ರಮುಖರು ಉಪಸ್ಥಿತರಿದ್ದರು.

> ಡಾ. ಎಸ್.ಆರ್. ನಾಗನೂರ ಮಾತನಾಡಿ, 140 ಕೋಟಿ ಜನಸಂಖ್ಯೆ ಹೊಂದಿರುವ ಭಾರತದಂತಹ ದೇಶದಲ್ಲಿ ಕೇವಲ 3 ಲಕ್ಷ ಜನರು ಮಾತ್ರ ಅಂಗಾಂಗ ದಾನಕ್ಕೆ ನೋಂದಣಿ ಮಾಡಿಕೊಂಡಿದ್ದಾರೆ. ಈ ಕುರಿತು ಸಾಕಷ್ಟು ಜಾಗೃತಿ ಕಾರ್ಯಕ್ರಮಗಳನ್ನು ನಡೆಸಿದರೂ ಸಹ ಅಂಗಾಂಗ ದಾನದ ಪ್ರಮಾಣದಲ್ಲಿ ನಿರೀಕ್ಷಿತ ಏರಿಕೆಯಾಗಿಲ್ಲ. ಈ ಹಿನ್ನೆಲೆಯಲ್ಲಿ ಎಚ್.ಕೆ. ಪಾಟೀಲರ ಜನ್ಮದಿನಾಚರಣೆಯ ಸಂದರ್ಭವನ್ನು ಬಳಸಿಕೊಂಡು ಸಾವಿರಕ್ಕೂ ಹೆಚ್ಚು ಜನರಿಂದ ಪ್ರತಿಜ್ಞಾ ಪತ್ರಗಳನ್ನು ಸಂಗ್ರಹಿಸಿ, ಸಮಾಜದಲ್ಲಿ ಅಂಗಾಂಗ ದಾನದ ಕುರಿತು ಹೆಚ್ಚಿನ ಅರಿವು ಮೂಡಿಸುವ ಉದ್ದೇಶವಿದೆ ಎಂದು ಹೇಳಿದರು.

## ಅರ್ಹರಿಗೆ ಇ-ಸ್ವತ್ತು ದಾಖಲೆ ವಿತರಣೆ



■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಗ್ರಾಮೀಣ ಭಾಗದಲ್ಲಿ ಅರ್ಹ ದಾಖಲಾತಿ ಹೊಂದಿರುವ ಆಸ್ತಿಗೆ ಇ-ಸ್ವತ್ತು ದಾಖಲೆ ನೀಡುವಲ್ಲಿ ಸರ್ಕಾರ ಮಹತ್ವದ ನಿರ್ಧಾರ ಕೈಗೊಂಡಿದೆ.

ಗ್ರಾಮೀಣ ಪ್ರದೇಶದವರು ಇದರ ಸದುಪಯೋಗ ಪಡೆದುಕೊಳ್ಳಬೇಕು ಎಂದು ಶಾಸಕ ಡಾ. ಚಂದ್ರು ಲಮಾಣಿ ಹೇಳದರು.

ಅವರು ಸೋಮವಾರ ಲಕ್ಷ್ಮೇಶ್ವರ ತಾಲೂಕಿನ ಮುನಿಯನ ತಾಂಡಾ ಕಂದಾಯ ಗ್ರಾಮದಲ್ಲಿ ಅರ್ಹರಿಗೆ ಇ-ಸ್ವತ್ತು (ಖಾತಾ) ವಿತರಿಸಿ ಮಾತನಾಡಿದರು.

ಅರ್ಹ ದಾಖಲೆಯುಳ್ಳ ಆಸ್ತಿಗಳನ್ನು ಗುರುತಿಸಿ ಇ-ಸ್ವತ್ತು ದಾಖಲೆ ವಿತರಿಸುವುದು ಗ್ರಾ.ಪಂ ಆಡಳಿತದ ಜವಾಬ್ದಾರಿಯಾಗಿದ್ದು, ಈ ಕಾರ್ಯದಲ್ಲಿ ಸಾರ್ವಜನಿಕರಿಗೆ ಯಾವುದೇ ತೊಂದರೆ, ಹೊರೆಯಾಗದಂತೆ ಕಾರ್ಯ ನಿರ್ವಹಿಸಬೇಕು ಎಂದರು.

ಈ ವೇಳೆ ತಹಸೀಲ್ದಾರ್ ಧನಂಜಯ ಎಂ, ಕೃಷ್ಣಪ್ಪ ಧರ್ಮರ, ಗ್ರಾ.ಪಂ ಅಧ್ಯಕ್ಷ ಚಂದ್ರಶೇಖರ ಈಳಿಗೇರ, ಜಾನು ಲಮಾಣಿ, ತುಕ್ಕಪ್ಪ ಪೂಜಾರ, ಲಕ್ಷ್ಮಣ ಲಮಾಣಿ, ಶಿವಪ್ಪ ನಾಯಕ, ದೇವಪ್ಪ ಲಮಾಣಿ, ಕೀರಪ್ಪ ಲಮಾಣಿ, ನಿಂಗಪ್ಪ ಬಂಕಾಪುರ, ಸೋಮಣ್ಣ ಲಮಾಣಿ ಸೇರಿದಂತೆ ಗ್ರಾ.ಪಂ ಸದಸ್ಯರು, ಮುಖಂಡರು ಇದ್ದರು.

## 858ನೇ ಬಸವ ಪಂಚಮಿ ಇಂದು



■ ವಿಜಯಸಾಕ್ಷಿ ಸುದ್ದಿ, ಗದಗ

ಮಹಾಮಾನವತಾವಾದಿ, ಜಗಜ್ಯೋತಿ, ಕರ್ನಾಟಕದ ಸಾಂಸ್ಕೃತಿಕ ನಾಯಕ, ವಿಶ್ವಗುರು ಬಸವಣ್ಣನವರು ಕ್ರಿ.ಶ. 1167ರಲ್ಲಿ ಕಪ್ಪಡಿ ಸಂಗಮನಾಥನಲ್ಲಿ ಶ್ರಾವಣ ಶುದ್ಧ ಪಂಚಮಿಯಂದು ಮಹಾಬಯಲಿನಲ್ಲಿ ಬಯಲಾಗಿ ಇಂದಿಗೆ 858 ವರ್ಷಗಳಾದವು. ಆ ಬಯಲ ಸ್ವರೂಪರಾದ ದಿನವನ್ನೇ 'ಬಸವ ಪಂಚಮಿ'ಯನ್ನಾಗಿ ಬಸವ ಭಕ್ತರು, ಬಸವತತ್ವಾನುಯಾಯಿಗಳು ನಾಡಿನಾದ್ಯಂತ ಆಚರಿಸುತ್ತಾ ಬಂದಿದ್ದಾರೆ.

ಈ ಹಿನ್ನೆಲೆಯಲ್ಲಿ ಜುಲೈ 29ರ ಮುಂಜಾನೆ 10 ಗಂಟೆಗೆ ವಿಶ್ವ ಕಲ್ಯಾಣ ಸಂಸ್ಥೆ, ಗದಗ ಭುವನೇಶ್ವರಿ ವಿಶೇಷ ಅಗತ್ಯವುಳ್ಳ ಮಕ್ಕಳ ಶಾಲೆ, ಶ್ರೀ ಸಿದ್ಧಲಿಂಗ ನಗರ (ಹುಡ್ಕೋ ವಾಟರ್ ಟ್ಯಾಂಕ್ ಹತ್ತಿರ,) ಗದಗ ಇಲ್ಲಿಯ ವಿದ್ಯಾರ್ಥಿಗಳಿಗೆ ಹಾಲು-ಬಿಸ್ಕೆಟ್ ವಿತರಿಸಲಾಗುವುದು. ನಂತರ 11 ಗಂಟೆಗೆ ಜಿಲ್ಲಾಸ್ಪತ್ರೆಯ ಒಳರೋಗಿಗಳಿಗೆ ಹಾಲು ವಿತರಣೆ, 12 ಗಂಟೆಗೆ ಭೀಷ್ಮ ಕೆರೆಯಲ್ಲಿರುವ ಶ್ರೀ ಬಸವೇಶ್ವರ ಮೂರ್ತಿ ಆವರಣದಲ್ಲಿ ಸಾಮೂಹಿಕ ವಚನ ಪ್ರಾರ್ಥನೆ ಜರುಗಲಿದೆ. ಈ ಎಲ್ಲ ಕಾರ್ಯಕ್ರಮದ ಸಾನ್ನಿಧ್ಯವನ್ನು ಪೂಜ್ಯ ಜಗದ್ಗುರು ತೋಂಟದ ಡಾ. ಸಿದ್ಧರಾಮ ಮಹಾಸ್ವಾಮಿಗಳು ವಹಿಸಿಕೊಳ್ಳುವರು. ಸಮ್ಮುಖವನ್ನು ಪೂಜ್ಯ ಡಾ. ಮಹಾಂತ ಬಸವಲಿಂಗ ಸ್ವಾಮಿಗಳು ಬೇಲೂರು ಇವರು ವಹಿಸುವರು. ಬಸವದಳ-ಬಸವಕೇಂದ್ರ, ಲಿಂಗಾಯತ ಪ್ರಗತಿಶೀಲ ಸಂಘ, ಜಗದ್ಗುರು ತೋಂಟದಾರ್ಯ ಜಾತ್ರಾಮಹೋತ್ಸವ ಸಮಿತಿ, ಶರಣ ಸಾಹಿತ್ಯ ಪರಿಷತ್ತು, ಜಾಗತಿಕ ಲಿಂಗಾಯತ ಮಹಾಸಭೆ ಹಾಗೂ ಬಸವರ ಸಂಘಟನೆಗಳ ಸದಸ್ಯರು ಜು.29ರಂದು ಮುಂಜಾನೆ 9 ಗಂಟೆಗೆ ಶ್ರೀಮಠಕ್ಕೆ ಆಗಮಿಸಿ ಕಾರ್ಯಕ್ರಮವನ್ನು ಯಶಸ್ವಿಗೊಳಿಸಬೇಕೆಂದು ಪ್ರಕಾಶ ಅಸುಂಡಿಯವರು ವಿನಂತಿಸಿದ್ದಾರೆ.

### ಜಿ-ಎನ್‌ಟಿಟಿಎಫ್ ಕೈಗಾರಿಕಾ ತರಬೇತಿ ಸಂಸ್ಥೆಯಲ್ಲಿ ವಿದ್ಯಾರ್ಥಿಗಳ ಸ್ವಾಗತ ಕಾರ್ಯಕ್ರಮ

## ಆವಿಷ್ಕಾರಗಳಿಂದ ತಂತ್ರಜ್ಞಾನಕ್ಕೆ ಹೊಸ ಆಯಾಮ




■ ವಿಜಯಸಾಕ್ಷಿ ಸುದ್ದಿ, ಗದಗ

ಸಣ್ಣ ಸಣ್ಣ ಆವಿಷ್ಕಾರಗಳು ತಂತ್ರಜ್ಞಾನ ಕ್ಷೇತ್ರದ ಅಭಿವೃದ್ಧಿಗೆ ಹೊಸ ಆಯಾಮ ಸೃಷ್ಟಿಸುತ್ತವೆ ಎಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ರೋಹನ್ ಜಗದೀಶ ಹೇಳಿದರು.

ನಗರದ ಹುಬ್ಬಳ್ಳಿ ರಸ್ತೆಯಲ್ಲಿರುವ ಜಿ-ಎನ್‌ಟಿಟಿಎಫ್ ಕೈಗಾರಿಕಾ ತರಬೇತಿ ಸಂಸ್ಥೆಯಲ್ಲಿ 2025-26ನೇ ಸಾಲಿನ ವಿದ್ಯಾರ್ಥಿಗಳ ಸ್ವಾಗತ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಅವರು ಮಾತನಾಡಿದರು.

ವಿದ್ಯಾರ್ಥಿಗಳು ತಮ್ಮಲ್ಲಿರುವ ತಾಂತ್ರಿಕ ಕೌಶಲ್ಯತೆ, ಜ್ಞಾನ, ಆಸಕ್ತಿ, ಪ್ರಯೋಗಶೀಲತೆಗಳನ್ನು ಉತ್ತೇಜಿಸುವುರೊಂದಿಗೆ ಉದ್ಯೋಗ ನೀಡುವ ಉದ್ಯಮಿಗಳಾಗುವಂತಾಗಬೇಕು ಎಂದು ಹೇಳಿದರು.

ಜಿ-ಎನ್‌ಟಿಟಿಎಫ್ ಕೈಗಾರಿಕಾ ತರಬೇತಿ ಸಂಸ್ಥೆಯ ಅಧ್ಯಕ್ಷ ಕೃಷ್ಣಗೌಡ ಎಚ್.ಪಾಟೀಲ ಅಧ್ಯಕ್ಷತೆ ವಹಿಸಿ ಮಾತನಾಡಿ, ಜಿ-ಎನ್‌ಟಿಟಿಎಫ್ ಕೈಗಾರಿಕಾ ತರಬೇತಿಯು ಯುವಕ-ಯುವತಿಯರ ಭವಿಷ್ಯ ನಿರ್ಮಾಣಕ್ಕೆ ಬಲವಾದ ಹಡಗು. ಶಿಕ್ಷಣ ಮತ್ತು ತಾಂತ್ರಿಕತೆ ಒಂದುಗೂಡಿ, ಅವರ ಬೆಳವಣಿಗೆಗೆ ದಾರಿ ಮಾಡಿಕೊಡುತ್ತಿದೆ ಎಂದು ಹೇಳಿದರು.

ತಾಂತ್ರಿಕ ವಸ್ತು ಪ್ರದರ್ಶನದ ನಿಮಿತ್ತ ಸಂಸ್ಥೆಯಲ್ಲಿ ವಿವಿಧ ವೃತ್ತಿಗಳಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಂದ ಆವಿಷ್ಕಾರಗಳ ತಾಂತ್ರಿಕ ಮಾದರಿ ಪ್ರದರ್ಶನ ನಡೆಯಿತು. ಆನ್‌ಲೈನ್ ಬುಕ್ಕಿಂಗ್ ಪೋರ್ಟಲ್, ಮಹಿಳಾ ಶಿಕ್ಷಣ ವ್ಯವಸ್ಥೆ, ಸ್ವಯಂಚಾಲಿತ ಬೀದಿ ದೀಪ, ಮಳೆ ಪತ್ತೆ ▸▸ 3ನೇ ಪುಟಕ್ಕೆ

## ಸಂಪಾದಕೀಯ

# ಯೂರಿಯಾ ಕೊರತೆ: ಸರ್ಕಾರ ಎಡವಿದ್ದೆಲ್ಲಿ?

ರಾಜ್ಯದಲ್ಲಿ ಯೂರಿಯಾ ಗೊಬ್ಬರದ ಕೊರತೆ ರೈತರನ್ನು ತೀವ್ರ ಸಂಕಷ್ಟಕ್ಕೆ ದೂಡಿದೆ. ಮುಂಗಾರು ಹಂಗಾಮಿನ ಕೃಷಿ ಚಟುವಟಿಕೆಗಳು ಬಿರುಸುಗೊಂಡಿರುವ ಈ ಸಮಯದಲ್ಲಿ ಯೂರಿಯಾ ಸಿಗದೆ ರೈತರು ಪರದಾಡುತ್ತಿದ್ದಾರೆ.

ಬಿತ್ತನೆ ಕಾರ್ಯಗಳು ಭರದಿಂದ ಸಾಗಿರುವ ಇಂತಹ ನಿರ್ಣಾಯಕ ಹಂತದಲ್ಲಿ ಗೊಬ್ಬರದ ಅಭಾವ ಕೃಷಿ ಉತ್ಪಾದನೆಯ ಮೇಲೆ ನೇರ ಪರಿಣಾಮ ಬೀರುವ ಆತಂಕ ಸೃಷ್ಟಿಸಿದೆ. ಯೂರಿಯಾ ಕೊರತೆಯನ್ನು ನಿಭಾಯಿಸುವಲ್ಲಿ ರಾಜ್ಯ ಸರ್ಕಾರ ಸಂಪೂರ್ಣವಾಗಿ ಎಡವಿದೆ.

ಬೇಡಿಕೆಗೆ ಅನುಗುಣವಾಗಿ ಗೊಬ್ಬರದ ಲಭ್ಯತೆಯನ್ನು ಖಚಿತಪಡಿಸಿಕೊಳ್ಳುವಲ್ಲಿ ಸರ್ಕಾರ ವಿಫಲವಾಗಿದೆ. ರಾಜ್ಯದಲ್ಲಿ ಈ ವರ್ಷ 8.50 ಲಕ್ಷ ಮೆಟ್ರಿಕ್ ಟನ್ ಯೂರಿಯಾ ಅಗತ್ಯವಿದ್ದರೂ, ಲಭ್ಯವಿರುವುದು 4.75 ಲಕ್ಷ ಮೆಟ್ರಿಕ್ ಟನ್ ಮಾತ್ರ. ಕೇಂದ್ರದಿಂದ ಬರಬೇಕಾದ 3.75 ಲಕ್ಷ ಮೆಟ್ರಿಕ್ ಟನ್ ಯೂರಿಯಾ ಯಾಕೆ ಬಂದಿಲ್ಲ ಎಂಬುದಕ್ಕೆ ಸ್ಪಷ್ಟ ಉತ್ತರ ದೊರೆತಿಲ್ಲ.

ಸಾಮಾನ್ಯವಾಗಿ ಮುಂಗಾರು ಆರಂಭಕ್ಕೂ ಮುನ್ನವೇ ಗೊಬ್ಬರದ ದಾಸ್ತಾನು ಮತ್ತು ವಿತರಣಾ ವ್ಯವಸ್ಥೆಯ ಕುರಿತು ಸರ್ಕಾರ ಸಮಗ್ರ ಯೋಜನೆ ರೂಪಿಸಬೇಕಿತ್ತು. ಆದರೆ, ಈಗ ರೈತರು ರಾಸಾಯನಿಕ ಗೊಬ್ಬರಕ್ಕಾಗಿ ಅಂಗಡಿಗಳ ಮುಂದೆ ಸರತಿ ಸಾಲಿನಲ್ಲಿ ನಿಲ್ಲುವ ದುಸ್ಥಿತಿ ನಿರ್ಮಾಣವಾಗಿದೆ.

ಕಾಳ ಸಂತೆಯಲ್ಲಿ ಗೊಬ್ಬರ ಮಾರಾಟವಾಗುತ್ತಿದೆ ಎಂಬ ಆರೋಪಗಳು ಕೇಳಿ ಬರುತ್ತಿದ್ದು, ಸರ್ಕಾರ ಇದರ ನಿಯಂತ್ರಣಕ್ಕೂ ಮುಂದಾಗಿಲ್ಲ. ರೈತರ ಸಮಸ್ಯೆಗಳನ್ನು ಆಲಿಸದೆ, ಸೂಕ್ತ ಪರಿಹಾರ ಒದಗಿಸದೆ ಸರ್ಕಾರ ನಿರ್ಲಕ್ಷ್ಯ ವಹಿಸಿರುವುದು ಸ್ಪಷ್ಟವಾಗಿದೆ. ಇಂತಹ ಪರಿಸ್ಥಿತಿ ಮುಂದುವರಿದರೆ, ಕೃಷಿ ಉತ್ಪಾದನೆ ಕುಂಠಿತವಾಗಿ, ಆಹಾರ ಭದ್ರತೆಯ ಮೇಲೂ ದುಷ್ಪರಿಣಾಮ ಬೀರಬಹುದು. ಸರ್ಕಾರ ತಕ್ಷಣ ಎಚ್ಚೆತ್ತುಕೊಂಡು ಯೂರಿಯಾ ಪೂರೈಕೆಗೆ ಅಗತ್ಯ ಕ್ರಮಗಳನ್ನು ಕೈಗೊಳ್ಳಬೇಕು.

## ಬರದ ನಾಡಲ್ಲಿ ಹತ್ತು ಎಕರೆ ಭೂಮಿಯನ್ನು ಹಸಿರು ವನವನ್ನಾಗಿ ಪರಿವರ್ತಿಸಿದ ಗದಗ ವೈದ್ಯ

# ಇವರ ಜಮೀನು ಈಗ ಮಿನಿ ಅರಣ್ಯ!



ಗದುಗಿನ ದಂತ ವೈದ್ಯರೊಬ್ಬರು ಕಳೆದ ಒಂಬತ್ತು ವರ್ಷಗಳಲ್ಲಿ ತಮ್ಮ 10 ಎಕರೆ ಭೂಮಿಯನ್ನು ಹಸಿರು ಕಾಡನ್ನಾಗಿ ಪರಿವರ್ತಿಸಿದ್ದಾರೆ. ಗದುಗಿನ ದಂತ ವೈದ್ಯ ಪ್ರದೀಪ್ ಎಸ್.ಉಗಲಾಟರಿಗೆ ಗದಗ ಜಿಲ್ಲೆಯ ಹುಯಿಲಗೋಳ ಗ್ರಾಮದ ಬಳಿ ಒಂದು ಹೊಲವಿದೆ. ದಶಕದ ಹಿಂದೆ ತಮ್ಮ ಬರಡು ಭೂಮಿಯನ್ನು ವೀಕ್ಷಿಸುತ್ತಿದ್ದಾಗ ಅರಣ್ಯೀಕರಣದ ಕಲ್ಪನೆ ವೈದ್ಯರ ಮನಸ್ಸಿಗೆ ಬಂದಿತು. ಜೀವವೈವಿಧ್ಯತೆ ಮತ್ತು ಪರಿಸರದ ಬಗ್ಗೆ ಅವರಿಗೆ ಅಪಾರ ಅಭಿರುಚಿ ಇರುವುದರಿಂದ, ಜಿಲ್ಲೆಯ ಒಣ ಪ್ರದೇಶದಲ್ಲಿ ಅರಣ್ಯೀಕರಣ ಯೋಜನೆಯನ್ನು ಮಾಡುವ ಬಗ್ಗೆ ಅವರು ಯೋಚಿಸಿದರು.

ಪ್ರದೀಪ್ ಈ ಸ್ಥಳವನ್ನು ಹಸಿರು ಕಾಡನ್ನಾಗಿ ಮಾಡುವ ಬಗ್ಗೆ ಯೋಚಿಸಿದರು ಮತ್ತು ಶ್ರೀಗಂಧ, ಸುಬಾಬುಲ್, ಬೇವು, ಮಲಬಾರ್ ಬೇವು ಅಲ್ಲದೆ ಸುಮಾರು 100 ಜಾತಿಯ ಮರಗಳನ್ನು ಬೆಳೆಸಿದರು. ಈ ಕಾಡಿನ ವಿಶಿಷ್ಟತೆಯೆಂದರೆ, ಬೋರ್‌ವೆಲ್ ಇಲ್ಲ ಮತ್ತು ಹೆಚ್ಚು ನೀರನ್ನು ಬಳಸದ ಅನೇಕ ಮರಗಳನ್ನು ಇಲ್ಲಿ ನೆಡಲಾಗಿದೆ. ಈ ವೈದ್ಯರು ಮಳೆಗಾಲದಲ್ಲಿ ಸಸಿಗಳನ್ನು ನೆಡುತ್ತಿದ್ದರು. ಈ ವೈದ್ಯರು ಕಾಡಿನ ಹಲವು ಭಾಗಗಳಲ್ಲಿ ಮತ್ತು ಸುತ್ತಮುತ್ತಲಿನ 10 ಎಕರೆ ಪ್ರದೇಶಗಳಲ್ಲಿ ನೀರು ಹೊರಗೆ ಹೋಗದಂತೆ ಎಲ್ಲ ಕಡೆಗೆ ಮೂರು ಅಡಿ ಕಂದಕವನ್ನು ಮಾಡಿದ್ದಾರೆ. ಇಡೀ ಮಾನವ ನಿರ್ಮಿತ ಅರಣ್ಯವು ಸುತ್ತಮುತ್ತಲಿನ ಪ್ರದೇಶಗಳಲ್ಲಿ ಕಳ್ಳಿ ಬೇಲಿಗಳನ್ನು ಹೊಂದಿದ್ದು, ಈ ಸ್ಥಳವನ್ನು ನೈಸರ್ಗಿಕ ಅರಣ್ಯವೆಂದು ಪರಿಗಣಿಸಲಾಗಿದೆ. ಈ ಮಾನವ ನಿರ್ಮಿತ ಅರಣ್ಯವನ್ನು ನೋಡಲು ಈಗ ಅನೇಕ ಜನರು ಭೇಟಿ ನೀಡುತ್ತಿದ್ದಾರೆ.

ಡಾ. ಪ್ರದೀಪ್ ಉಗಲಾಟ 2016ರಲ್ಲಿಯೇ ಈ ಭೂಮಿಯಲ್ಲಿ ಒಂದು ಮಿನಿ ಅರಣ್ಯವನ್ನು ಮಾಡುವ ಬಗ್ಗೆ ಯೋಚಿಸಿದರು. ಅವರು 10.34 ಎಕರೆ ವಿಸ್ತೀರ್ಣದ ತಮ್ಮ ಭೂಮಿಗೆ ಭೇಟಿ ನೀಡಿ ಪಕ್ಷಿಗಳನ್ನು ಆಕರ್ಷಿಸುವ ಮತ್ತು ಜೈವಿಕ ವೈವಿಧ್ಯತೆಯ ಉದ್ಯಾನವನವನ್ನು ರಚಿಸುವ ಬಗ್ಗೆ ಯೋಚಿಸಿದರು. ಹುಯಿಲಗೋಳ ಮತ್ತು ಸುತ್ತಮುತ್ತಲಿನ ಸ್ಥಳಗಳ ಬಳಿಯ ಭೂಮಿ ಕಳೆದ ಕೆಲವು ದಶಕಗಳಲ್ಲಿ ಯಾವಾಗಲೂ ಕಡಿಮೆ ಮಳೆಯಾಗಿರುವುದರಿಂದ ಅವರ ಈ ಯೋಚನೆ ಕೇಳಿ ಕೆಲವರು ನಕ್ಕರು. ಆದರೆ ಉದ್ಯಾನವನದ ನಕ್ಷೆ ಮತ್ತು ಸ್ಪಷ್ಟ ಕಲ್ಪನೆಯನ್ನು ಹೊಂದಿದ್ದರಿಂದ ಅವರು ಹಿಂದೆ ಸರಿಯಲಿಲ್ಲ. ಅವರು ಕಡಿಮೆ ನೀರು ಬೇಡುವ ಸಸ್ಯಗಳೊಂದಿಗೆ ಪ್ರಾರಂಭಿಸಿದರು. ನಂತರ ಮಳೆಗಾಲದಲ್ಲಿ ನೀರನ್ನು ಉಳಿಸಲು ಕಂದಕವನ್ನು ರಚಿಸಿದರು.

ಆರಂಭಿಕ ಹಂತಗಳಲ್ಲಿ, ಅನೇಕ ಸಾಕು ಪ್ರಾಣಿಗಳು ಸಸ್ಯಗಳನ್ನು ತಿನ್ನುತ್ತಿದ್ದರಿಂದ, ಡಾ. ಪ್ರದೀಪ್ ತುಂಬಾ ಕಷ್ಟಪಟ್ಟರು. ನಾಲ್ಕು ವರ್ಷಗಳಲ್ಲಿ, ಮರಗಳು ಬೆಳೆದಂತೆ ಅನೇಕ ಪಕ್ಷಿಗಳು ಈ ಸ್ಥಳಕ್ಕೆ ಬರಲು ಪ್ರಾರಂಭಿಸಿದವು. ಅಳಿಲು, ಹಲ್ಲಿಗಳ ಪ್ರಭೇದಗಳು, ಜೇಡಗಳು ಮತ್ತು ಇನ್ನೂ ಅನೇಕ ಸಣ್ಣ ಪ್ರಭೇದಗಳು ಈ ಮಾನವ ನಿರ್ಮಿತ ಕಾಡಿನಲ್ಲಿ ಗುರುತಿಸಲು ಪ್ರಾರಂಭಿಸಿದವು.

ಈ ವನದಲ್ಲಿ ಬೇವು, ಹೆಬ್ಬೇವು, ಬನ್ನಿ, ಕರ್ಜಲಿ, ಸುಬಾಭುಲಿ, ಸಾಗವಾನಿ, ಶ್ರೀಗಂಧ, ನುಗ್ಗೆ, ಬೆಟ್ಟದ ನೆಲ್ಲಿ, ಕರಿಬೇವು, ಮಟ್ಟೇಗಿಡ, ಹೊಂಗೆ, ಹುಣಸೆ, ಬೀಟ್‌ರೂಟ್, ಮಹಾಗನಿ, ಮಳೆ ಮರ, ಸೀತಾಫಲ, ಪೇರಲ, ಅಗಸೆ, ಹಲಸು ಮುಂತಾದ ಮರಗಳ ಪ್ರಭೇದಗಳು ಅಲ್ಲದೆ ಹೆಸರು ಗೊತ್ತಿರದ ಅನೇಕ ಆಯುರ್ವೇದ ಸಸ್ಯಗಳೂ ಇವೆ.

ಡಾ. ಪ್ರದೀಪ್ ಗದಗ ಪಟ್ಟಣದಲ್ಲಿ ತಮ್ಮದೇ ಆದ ಕ್ಲಿನಿಕ್ ಅನ್ನು ಹೊಂದಿದ್ದಾರೆ. ಸಸ್ಯಗಳ ಬೆಳವಣಿಗೆಯನ್ನು ಪತ್ತೆಹಚ್ಚಲು ಅವರು ಪ್ರತಿದಿನ ಇಡೀ 10 ಎಕರೆ ಪ್ರದೇಶದಲ್ಲಿ ನಡೆಯುತ್ತಿದ್ದರು. ಈಗ ಈ ಸ್ಥಳವು ಜೀವವೈವಿಧ್ಯ ಉದ್ಯಾನವನವಾಗಿದೆ.

ನನ್ನ ಶಾಲಾ ದಿನಗಳಿಂದಲೂ ನನಗೆ ಜೀವವೈವಿಧ್ಯದ ಬಗ್ಗೆ ಆಸಕ್ತಿ. ನನ್ನ ಭೂಮಿಯನ್ನು ನೋಡಿದಾಗ ನಾನು ಅರಣ್ಯೀಕರಣಕ್ಕಾಗಿ ಯೋಜಿಸಿದ್ದೆ. ಜಿಲ್ಲೆಯ ಇತರ ಭಾಗಗಳಿಗೆ ಹೋಲಿಸಿದರೆ ಈ ಸ್ಥಳವು ತುಂಬಾ ಕಡಿಮೆ ಮಳೆಯಾಗುವುದರಿಂದ ಇದು ತುಂಬಾ ಕಠಿಣವಾಗಿದೆ ಎಂದು ಅನೇಕ ಜನರು ಸಲಹೆ ನೀಡಿದರು. ಆದರೆ ನಾನು ಅರಣ್ಯವನ್ನು ಮಾಡುವ ಕನಸು ಕಂಡೆ ಮತ್ತು ಅದನ್ನು ಸಾಧಿಸಿದೆ ಎನ್ನುತ್ತಾರೆ ಡಾ. ಪ್ರದೀಪ್.

ಗದಗ ಶಲ್ಯ ತಂತ್ರದ ಡಿಜಿಎಂ ಆಯುರ್ವೇದ ವೈದ್ಯಕೀಯ ಕಾಲೇಜು ಮತ್ತು ಆಸ್ಪತ್ರೆಯ ಪ್ರಾಧ್ಯಾಪಕ ಮತ್ತು ಮುಖ್ಯಸ್ಥ ಡಾ. ಎಂ.ಡಿ. ಸಾಮುದ್ರಿ, ಡಾ. ಪ್ರದೀಪ್ ಉಗಲಾಟ ಕೆಲವು ವರ್ಷಗಳ ಹಿಂದೆ ಹುಯಿಲಗೋಳ ಗ್ರಾಮದ ಒಣ ಭೂಮಿಯಲ್ಲಿ ಅರಣ್ಯವನ್ನು ಮಾಡಲು ಪ್ರಾರಂಭಿಸಿದರು.

ಈಗ ಅದು ದಟ್ಟವಾದ ಕಾಡಾಗಿ ಬೆಳೆದು ಅನೇಕ ಜಾತಿಯ ಪಕ್ಷಿಗಳು ಮತ್ತು ಪ್ರಾಣಿಗಳಿಗೆ ಆಶ್ರಯ ನೀಡಿದೆ. ಈಗ ಪ್ರಕೃತಿ ಪ್ರಿಯರು ಮತ್ತು ಹಸಿರು ಕಾರ್ಯಕರ್ತರು ಈ ಸ್ಥಳಕ್ಕೆ ಭೇಟಿ ನೀಡುತ್ತಿದ್ದಾರೆ ಮತ್ತು ಅಂತಹ ಒಣ ಭೂಮಿಯಲ್ಲಿ ಮಿನಿ ಅರಣ್ಯವನ್ನು ಅಭಿವೃದ್ಧಿಪಡಿಸಲು ಆಲೋಚನೆಗಳನ್ನು ಪಡೆಯುತ್ತಿದ್ದಾರೆ ಎಂದು ಸಂತಸ ವ್ಯಕ್ತಪಡಿಸಿದರು.

ಪಿಡಿಜಿ ರೋಟೇರಿಯನ್ ಡಾ. ಪ್ರಾಣೇಶ್ ಜಹಗೀರದಾರ ಪ್ರತಿಕ್ರಿಯಿಸಿ, ಡಾ. ಪ್ರದೀಪ್ ಉಗಲಾಟ ಅವರು 2008–09ರಲ್ಲಿ ಜಿಲ್ಲಾ ಗವರ್ನರ್ ಆಗಿದ್ದಾಗ ರೋಟರಿ ಕ್ಲಬ್‌ನ ಕಾರ್ಯದರ್ಶಿಯಾಗಿ ಸೇವೆ ಸಲ್ಲಿಸಿದ್ದರು. ಗದಗ ಜಿಲ್ಲೆಯ ಹುಯಿಲ್‌ಗೋಳ ಗ್ರಾಮದ ಬಳಿ ಅವರ ಪತ್ನಿ ನೀಲಾಂಬಿಕಾ ಅವರ ಸಕ್ರಿಯ ಬೆಂಬಲದೊಂದಿಗೆ ಅವರ ಸ್ವಂತ ಭೂಮಿಯಲ್ಲಿ ಅಭಿವೃದ್ಧಿಪಡಿಸಿದ ನಿಜವಾದ ಜೀವವೈವಿಧ್ಯ ಉದ್ಯಾನವನದ ರೂಪದಲ್ಲಿ ಮಾನವ ನಿರ್ಮಿತ ಅರಣ್ಯಕ್ಕೆ ಭೇಟಿ ನೀಡಿದ ಅನುಭವವು ರೋಮಾಂಚನಕಾರಿಯಾಗಿತ್ತು ಎನ್ನುತ್ತಾರೆ.

– ರಘೋತ್ತಮ ಕೊಪ್ಪರ.
ಪತ್ರಕರ್ತರು, ಪಾರಂಪರಿಕ ವೈದ್ಯರು.
ಗದಗ.

# ಹೃದಯಾಘಾತ: ಬ್ಯಾಡ್ಮಿಂಟನ್ ಆಡುವಾಗಲೇ 25ರ ಯುವಕ ಸಾವು!

■ವಿಜಯಸಾಕ್ಷಿ ಸುದ್ದಿ, ಹೈದರಾಬಾದ್

ಬ್ಯಾಡ್ಮಿಂಟನ್ ಆಡುವಾಗಲೇ 25ರ ಯುವಕ ಹೃದಯಾಘಾತದಿಂದ ಸಾವನ್ನಪ್ಪಿದ ಘಟನೆ ಹೈದರಾಬಾದ್‌ನ ನಾಗೋಲೆ ಕ್ರೀಡಾಂಗಣದಲ್ಲಿ ಜರುಗಿದೆ.

ಗುಂಡ್ಲಾ ರಾಕೇಶ್ ಮೃತ ಯುವಕ. ಹೈದರಾಬಾದ್‌ನ ಖಾಸಗಿ ಸಂಸ್ಥೆಯ ಉದ್ಯೋಗಿ ರಾಕೇಶ್, ಖಮ್ಮಮ್ ಜಿಲ್ಲೆಯ ತಲ್ಲಡದ ಮಾಜಿ ಉಪ ಸರಪಂಚ ಗುಂಡ್ಲಾ ವೆಂಕಟೇಶ್ವರಲು ಅವರ ಪುತ್ರ. ಭಾನುವಾರ ಸಂಜೆ ಹೈದರಾಬಾದ್‌ನ ನಾಗೋಲೆ ಕ್ರೀಡಾಂಗಣದಲ್ಲಿ ಬ್ಯಾಡ್ಮಿಂಟನ್ ಆಡುವಾಗ ಹೃದಯಾಘಾತದಿಂದ ಕುಸಿದುಬಿದ್ದು ದುರಂತ ಸಂಭವಿಸಿದೆ.

ಸಾಮಾಜಿಕ ಜಾಲತಾಣಗಳಲ್ಲಿ ಘಟನೆಯ ಸಿಸಿಟಿವಿ ದೃಶ್ಯಾವಳಿಗಳು ವೈರಲ್ ಆಗಿದೆ.

ಲಕ್ಷ್ಮೇಶ್ವರ ತಾಲೂಕಿನ ಆದ್ರಳ್ಳಿ ಗವಿಮಠದ ಶ್ರೀ ಕುಮಾರ ಮಹಾರಾಜ ಸ್ವಾಮಿಗಳು ಲೋಕ ಕಲ್ಯಾಣಾರ್ಥವಾಗಿ ಜು.23ರಿಂದ ಆ.2 ವರೆಗೆ ಹಿಮಾಲಯದ ಗಂಗಾ ನದಿ ಉಗಮಸ್ಥಾನ ಗೋಮುಖದಲ್ಲಿ 11 ದಿನಗಳ ಕಾಲ ತಪೋನುಷ್ಠಾನ ಕೈಗೊಂಡಿದ್ದಾರೆ.

ಶ್ರೀಗಳು ಈ ರೀತಿ ಲೋಕ ಕಲ್ಯಾಣಾರ್ಥ ಅನೇಕ ಬಾರಿ ಅನುಷ್ಠಾನ ಮಾಡಿದ್ದು, ಅವರು ಅನುಷ್ಠಾನ ಮೂರ್ತಿಗಳೆಂದೇ ಹೆಸರಾಗಿದ್ದಾರೆ ಎಂದು ಭಕ್ತರು ತಿಳಿಸಿದ್ದಾರೆ.



# ಯೋಧರ ತ್ಯಾಗ, ಬಲಿದಾನವನ್ನು ಸ್ಮರಿಸೋಣ

■ವಿಜಯಸಾಕ್ಷಿ ಸುದ್ದಿ, ಗದಗ




ನಗರದ ಜೆ.ಟಿ. ಪದವಿಪೂರ್ವ ಮಹಾವಿದ್ಯಾಲಯ, ಮೇರಾ ಯುವ ಭಾರತ ಗದಗ ಹಾಗೂ ರಾಷ್ಟ್ರೋತ್ಥಾನ ಪರಿಷತ್ ಇವರ ಸಂಯುಕ್ತ ಆಶ್ರಯದಲ್ಲಿ ಕಾರ್ಗಿಲ್ ವಿಜಯೋತ್ಸವವನ್ನು ಸಂಭ್ರಮದಿಂದ ಆಚರಿಸಲಾಯಿತು.

ಕಾರ್ಯಕ್ರಮದಲ್ಲಿ ರಾಷ್ಟ್ರೋತ್ಥಾನ ವಿಭಾಗ ಸಂಯೋಜಕ ವೀರೇಂದ್ರ ಗೌಡ ಪಾಟೀಲ್ ಮಾತನಾಡಿ, ಕಾರ್ಗಿಲ್ ಯುದ್ಧದಲ್ಲಿ ಹೋರಾಡಿದ ಪ್ರತಿಯೊಬ್ಬ ಯೋಧರ ತ್ಯಾಗ, ಬಲಿದಾನದ ಸ್ಮರಣೆ ಮಾಡಬೇಕು ಎಂದರು. ಅಧ್ಯಕ್ಷತೆ ವಹಿಸಿದ್ದ ಕಾಲೇಜಿನ ಪ್ರಾಂಶುಪಾಲ ಬಿ.ಎಂ. ಹಾವೇರಿ ಮಾತನಾಡಿ, ಪ್ರತಿಯೊಬ್ಬ ವಿದ್ಯಾರ್ಥಿಯೂ ದೇಶಪ್ರೇಮವನ್ನು ಬೆಳೆಸಿಕೊಳ್ಳಬೇಕು ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ರಂಜನ್ ಬಿ, ರವಿ ಹೊಂಬಾಳಿ, ಚಂದ್ರು ಕುಂದಗೋಳ ಮುಂತಾದವರು ಭಾಗವಹಿಸಿದ್ದರು.



**ಮುಳಗುಂದ:** ಮಾಜಿ ರಾಷ್ಟ್ರಪತಿ ಭಾರತ ರತ್ನ ಡಾ ಎಪಿಜೆ ಅಬ್ದುಲ್ ಕಲಾಂ ಅವರ 10ನೇ ವರ್ಷದ ಪುಣ್ಯಸ್ಮರಣೆ ಅಂಗವಾಗಿ ಎಪಿಜೆ ಅಬ್ದುಲ್ ಕಲಾಂ ಅಲ್ಪಸಂಖ್ಯಾತ ಪತ್ತಿನ ಸಹಕಾರಿ ಸಂಘದಲ್ಲಿ ಅವರ ಭಾವಚಿತ್ರಕ್ಕೆ ಪುಷ್ಪ ನಮನ ಸಲ್ಲಿಸಿ ಗೌರವ ಸಲ್ಲಿಸಲಾಯಿತು. ಈ ಸಂದರ್ಭದಲ್ಲಿ ಸಂಘದ ನಿರ್ದೇಶಕರಾದ ತಾಜುದ್ದೀನ್ ಕಿಂಡ್ರಿ, ಎ ಡಿ ಮುಜಾವರ, ಯುವ ಮುಖಂಡರಾದ ಎಸ್ ಕೆ ಹಸಬಿ, ಹೈದರ್ ಖವಾಸ, ದಾವಲಸಾಬ ಲಕ್ಷ್ಮೇಶ್ವರ, ಮುನ್ನಾ ಢಾಲಾಯತ, ಶಿಕ್ಷಕರಾದ ಮಂಜುನಾಥ ಮಟ್ಟಿ, ಎಂ ಎಸ್ ಹಿರೇಕಲ್ಲ್ , ಗಿರೀಶ್, ವರದಿಗಾರರಾದ ವಿ ಡಿ ಸಿದ್ದನಗೌಡರ ಹಾಗೂ ಬ್ಯಾಂಕ್ ಸಿಬ್ಬಂದಿ ದಾವೂದ್ ಜಮಾಲ್, ಸಮೀರ್ ಹಣಗಿ ಹಾಜರಿದ್ದರು.

## ಶ್ರೀ ಅನ್ನದಾನ ವಿಜಯ ಬಾಲಕಿಯರ ಪ್ರೌಢಶಾಲೆಯಲ್ಲಿ ಸಾಂಸ್ಕೃತಿಕ ಚಟುವಟಿಕೆಗಳ ಉದ್ಘಾಟನೆ

# ಶ್ರೀಗಳಿಗೆ ಶಿಕ್ಷಣದ ಬಗ್ಗೆ ಅತೀವ ಕಾಳಜಿಯಿತ್ತು

■ವಿಜಯಸಾಕ್ಷಿ ಸುದ್ದಿ, ನರೇಗಲ್ಲ



ನಾಲ್ಕನೇ ತರಗತಿ ಓದಿದ್ದ ಲಿಂ. ಗುರು ಅನ್ನದಾನ ಸ್ವಾಮೀಜಿಗಳು ವಿಶ್ವ ವಿದ್ಯಾಲಯದ ಸ್ಥಾಪನೆಯ ಉತ್ಕೃಷ್ಟ ಚಿಂತನೆ ಹೊಂದಿದ್ದರು. ಶಿಕ್ಷಣದ ಬಗ್ಗೆ ಅತೀವ ಕಾಳಜಿ, ಅದರಲ್ಲೂ ಬಡ ಮಕ್ಕಳ ವಿದ್ಯಾಭ್ಯಾಸದ ಕುರಿತಾಗಿ ಅವರಿಗಿದ್ದ ಉದಾತ್ತ ಆಲೋಚನೆಗಳು ಹಾಗೂ ಮುಂದಾಲೋಚನೆಯ ಫಲ ಸ್ವರೂಪವಾಗಿಯೇ ಸ್ವಾತಂತ್ರ್ಯ ಪೂರ್ವದಲ್ಲಿಯೇ ನರೇಗಲ್ಲನಲ್ಲಿ ವಿದ್ಯಾಸಂಸ್ಥೆಗಳು ಆರಂಭವಾದವು ಎಂದು ಉಪನ್ಯಾಸಕ ಎಫ್.ಎನ್. ಹುಡೇದ ಹೇಳಿದರು.

ಪಟ್ಟಣದ ಶ್ರೀ ಅನ್ನದಾನ ವಿಜಯ ಬಾಲಕಿಯರ ಪ್ರೌಢಶಾಲೆಯಲ್ಲಿ ಸನ್ 2025–26ನೇ ಸಾಲಿನ ಸಾಂಸ್ಕೃತಿಕ ಚಟುವಟಿಕೆಗಳ ಉದ್ಘಾಟನೆ, ಶಾಲಾ ಸಂಸ್ಥಾಪಕರ ದಿನಾಚರಣೆ, ಶಾಲಾ ಸಂಸತ್ ಸದಸ್ಯರ ಪ್ರಮಾಣ ವಚನ, ಪ್ರತಿಭಾ ಪುರಸ್ಕಾರ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಪೂಜ್ಯರ ತಪಃಶಕ್ತಿ, ಇಚ್ಛಾಶಕ್ತಿ, ಕಾಯಕ ಶಕ್ತಿಗಳಿಂದ ಆರಂಭಗೊಂಡ ಹಲವು ಸಂಸ್ಥೆಗಳಲ್ಲಿ ಒಂದಾಗಿರುವ ಶ್ರೀ ಅನ್ನದಾನ ವಿಜಯ ಬಾಲಕಿಯರ ಪ್ರೌಢಶಾಲೆ ನರೇಗಲ್‌ನ ಮಾದರಿ ವಿದ್ಯಾಸಂಸ್ಥೆಯಾಗಿದೆ. ಸುವರ್ಣ ಮಹೋತ್ಸವದ ಸಂಭ್ರಮದಲ್ಲಿರುವ ಶಾಲೆಯು ಸಂಸ್ಥಾಪಕರ ದಿನ ಆಚರಣೆ ಮಾಡುತ್ತಿರುವದು ಶ್ಲಾಘನೀಯ ಎಂದರು.

ಶಾಲೆಯ ಆಡಳಿತ ಮಂಡಳಿ ಚೇರಮನ್ ವೀರಣ್ಣ ಹಳ್ಳಿ ಕಾರ್ಯಕ್ರಮ ಉದ್ಘಾಟಿಸಿದರು. ನೂತನವಾಗಿ ಆಯ್ಕೆಯಾದ ಶಾಲಾ ಸಂಸತ್ತಿನ ಪದಾಧಿಕಾರಿಗಳಿಗೆ ಶಿಕ್ಷಕ ಎಸ್. ಶಿವಮೂರ್ತಿ ಪ್ರಮಾಣ ವಚನ ಬೋಧಿಸಿದರು. 2025ರ ಎಸ್‌ಎಸ್‌ಎಲ್‌ಸಿ ಪರೀಕ್ಷೆ–1ರಲ್ಲಿ ಉತ್ತಮ ಸಾಧನೆ ಮಾಡಿದ ವಿದ್ಯಾರ್ಥಿನಿಯರಿಗೆ ಸನ್ಮಾನಿಸಲಾಯಿತು. ಕಾರ್ಯಕ್ರಮದ ಅಧ್ಯಕ್ಷತೆಯನ್ನು ಸಂಸ್ಥೆಯ ಆಡಳಿತಾಧಿಕಾರಿ ಎನ್.ಆರ್. ಗೌಡರ ವಹಿಸಿದ್ದರು. ಆಡಳಿತ ಮಂಡಳಿ ಸದಸ್ಯರಾದ ನಿಂಗನಗೌಡ ಲಕ್ಕನಗೌಡರ, ಮಲ್ಲಿಕಾರ್ಜುನಪ್ಪ ಮೆಣಸಗಿ, ಅಂದಾನಪ್ಪ ಬೂದಿಹಾಳ, ಬಿ.ಡಿ. ಯರಗೊಪ್ಪ, ಎಂ.ಎಸ್. ಅತ್ತಾರ, ಅರುಣಕುಮಾರ, ಎಸ್. ಎಫ್. ಧರ್ಮಾಯತ, ಆರ್.ಎಂ. ಗುಳಬಾಳ, ಗೀತಾ ಭೋಪಳಾಪುರ, ಪ್ರಶಿಕ್ಷಣಾರ್ಥಿ ದೀಪಾ ರಡ್ಡೇರ, ಜ್ಯೋತಿ ಪೂಜಾರ, ವೀರೇಶ ಚುಳಕಿ, ಸಂಗಮೇಶ ಕುರಡಗಿ ಉಪಸ್ಥಿತರಿದ್ದರು.

ಮುಖ್ಯ ಶಿಕ್ಷಕ ಎಸ್.ಎನ್. ಹೂಲಗೇರಿ ಸ್ವಾಗತಿಸಿದರು, ಪ್ರಿಯಾ ಹೊನ್ನಪ್ಪಗೌಡರ ಹಾಗೂ ಗೋದಾವರಿ ಕಮ್ಮಾರ ನಿರೂಪಿಸಿದರು, ಎ.ಟಿ. ಮಳ್ಳಳ್ಳಿ ವಂದಿಸಿದರು.

# ರೊಟ್ಟಿ ವಿನಿಮಯ ಮಾಡಿಕೊಂಡ ನಾರಿಯರು



■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಶ್ರಾವಣ ಮಾಸದ ಮೊದಲ ಹಬ್ಬ ನಾಗರ ಪಂಚಮಿ. ಈ ಹಬ್ಬಕ್ಕೆ ಮುನ್ನುಡಿ ರೊಟ್ಟಿ ಪಂಚಮಿ. ಭಾನುವಾರದಂದು ನರೇಗಲ್ಲ ಹೋಬಳಿಯಾದ್ಯಂತ ತಮ್ಮ ನೆಚ್ಚಿನ ಹಬ್ಬವಾದ ರೊಟ್ಟಿ ಪಂಚಮಿಯನ್ನು ಸಂಭ್ರಮದಿಂದ ಆಚರಿಸಿದ ನಾರಿಯರು ರೊಟ್ಟಿ ವಿನಿಮಯ ಮಾಡಿಕೊಂಡು ಸಂತಸಪಟ್ಟರು.

ಜಕ್ಕಲಿ ಗ್ರಾಮದಲ್ಲಿ ಮಹಿಳೆಯರು, ಮಕ್ಕಳು ವಿವಿಧ ಹೊಸ ಬಗೆಯ ಉಡುಪುಗಳನ್ನು ಧರಿಸಿ ನೆರೆ–ಹೊರೆ ಮನೆ ಮನೆಯಲ್ಲೂ ಸಂಭ್ರಮದೊಂದಿಗೆ ರೊಟ್ಟಿ ಹಂಚುವುದು ಎಲ್ಲೆಡೆ ಕಂಡು ಬಂದಿತು. ರೊಟ್ಟಿ ಪಂಚಮಿ ಉತ್ತರ ಕರ್ನಾಟಕದಲ್ಲಿಯೇ ಮಹಿಳೆಯರ ಅಚ್ಚುಮೆಚ್ಚಿನ ಹಬ್ಬ. ಕಳೆದ ಒಂದು ವಾರದಿಂದ ವಿವಿಧ ಬಗೆಯ ಜೋಳದ ರೊಟ್ಟಿ, ಸಜ್ಜಿರೊಟ್ಟಿ, ಎಳ್ಳುರೊಟ್ಟಿ, ಗುರೆಳ್ಳು ಚಟ್ನಿ, ಚಪಾತಿ, ಹಿಟ್ಟಿನ ಪಲ್ಯ, ಹೆಸರುಕಾಳು ಪಲ್ಯ, ಮಡಿಕೆಕಾಳು ಪಲ್ಯ ತಯಾರಿಸಿಕೊಂಡು ಮನೆಯ ದೇವರಿಗೆ ಪೂಜೆಯೊಂದಿಗೆ ನೈವೇದ್ಯ ಸಲ್ಲಿಸಿದರು.

ಮುಂಜಾನೆಯಿಂದ ಪ್ರಾರಂಭವಾದ ಈ ರೊಟ್ಟಿ ಹಂಚುವ ಕಾರ್ಯ ಇಳಿ ಹೊತ್ತಿನವರೆಗೂ ನಡೆಯಿತು. ಈ ಕಾರ್ಯಕ್ರಮದಲ್ಲಿ ಗ್ರಾಮದ ಮೆಣಸಗಿಯವರ ಓಣಿಯ ಶರಣಮ್ಮ ನರೇಗಲ್ಲ, ನಂದಾ ಮೆಣಸಗಿ, ಬಸವಣ್ಣೆಮ್ಮ ಸೋಮನಕಟ್ಟಿ, ದೇವಕ್ಕ ಪಲ್ಲೇದ, ಗುರುಬಸವ್ವ ಗೆದಗೇರಿ, ಭೀಮವ್ವ ಕರೇಕುಲದ, ಕಳಕವ್ವ ಅಂಗಡಿ, ಶಿಲ್ಪಾ ಮೆಣಸಗಿ, ಬಸವಣ್ಣೆಮ್ಮ ನರೇಗಲ್ಲ, ಶಾರದಾ ಬುಳ್ಳಾ, ವಿಜಯಲಕ್ಷ್ಮೀ ಪಲ್ಲೇದ, ಕೀರ್ತಿ ಮೆಣಸಗಿ, ವೈಷ್ಣವಿ ಹೂಗಾರ, ಲಕ್ಷ್ಮೀ ಮಡಿವಾಳರ, ಪ್ರತೀಕ್ಷಾ ಮಂಗಳಗುಡ್ಡ, ಕೃತಿಕಾ ಮೆಣಸಗಿ, ನಂದೀತಾ ಕರೇಕುಲದ ಇನ್ನಿತರರು ಇದ್ದರು.

## ಗಂಗಿಮಡಿ ಸರ್ಕಾರಿ ಶಾಲೆಯಲ್ಲಿ ಸಲಹಾತ್ಮಕ ಚಟುವಟಿಕೆಗಳ ಪೋಷಕರ ಸಭೆ

# ಕಲಿಕೆಯ ಮೂಲ ಮನೆಯಿಂದಲೇ ಆರಂಭ

■ವಿಜಯಸಾಕ್ಷಿ ಸುದ್ದಿ, ಗದಗ




ಮುಗ್ಧ ಮಗುವಿನ ಕಲಿಕೆಗೆ ಮೂಲ ಅಡಿಪಾಯವು ಮನೆಯಿಂದಲೇ ಪ್ರಾರಂಭಗೊಳ್ಳುತ್ತದೆ. ಮಕ್ಕಳ ಬೆಳವಣಿಗೆಗೆ ಪ್ರೋತ್ಸಾಹ ಹಾಗೂ ಉತ್ತಮ ಮಾರ್ಗದರ್ಶನ ನೀಡುವುದು ಹಾಗೂ ಅನುಕೂಲಕರವಾದ ಕಲಿಕಾ ವಾತಾವರಣ ನಿರ್ಮಿಸುವಲ್ಲಿ ಪಾಲಕ ಹಾಗೂ ಪೋಷಕರು ನಿರ್ಣಾಯಕ ಪಾತ್ರ ವಹಿಸುತ್ತಾರೆ ಎಂದು ಸಂಪನ್ಮೂಲ ವ್ಯಕ್ತಿ ಕವಿತಾ ಬೇಲೇರಿ ಹೇಳಿದರು.

ಅವರು ಶನಿವಾರ ಗದಗ ಶಹರದ ಸರ್ಕಾರಿ ಪ್ರಾಥಮಿಕ ಶಾಲೆ ಗಂಗಿಮಡಿಯಲ್ಲಿ ಜರುಗಿದ 'ಬನ್ನಿ, ಮನೆಗಳಲ್ಲಿ ಮಕ್ಕಳ ಕಲಿಕಾ ವಾತಾವರಣ ನಿರ್ಮಾಣ ಮಾಡೋಣ; ಸಲಹಾತ್ಮಕ ಚಟುವಟಿಕೆಗಳ ಪೋಷಕರ ಸಭೆ–1' ಕಾರ್ಯಕ್ರಮದಲ್ಲಿ ಅತಿಥಿಗಳಾಗಿ ಪಾಲ್ಗೊಂಡು ಮಾತನಾಡಿದರು.

ಹಲವಾರು ಪೋಷಕರು ತಮ್ಮ ಮಕ್ಕಳ ಶಿಕ್ಷಣಕ್ಕಾಗಿ ಸಮಯ ಹಾಗೂ ಸಂಪನ್ಮೂಲಗಳನ್ನು ವಿನಿಯೋಗಿಸುವಲ್ಲಿ ಸವಾಲುಗಳನ್ನು ಎದುರಿಸುತ್ತಾರೆ. ಅದಕ್ಕಾಗಿ ಪೋಷಕರ ಸಬಲೀಕರಣ ಉಪಕ್ರಮವೇ ಈ ಸಭೆಯ ಉದ್ದೇಶವಾಗಿದ್ದು, ತಮ್ಮ ಮಗುವಿನ ಕಲಿಕೆಯ ಪ್ರಕ್ರಿಯೆಯಲ್ಲಿ ಪೋಷಕರು ಸಕ್ರಿಯವಾಗಿ ತೊಡಗಿಕೊಳ್ಳುವಂತೆ ಮಾಡುವ ಉದ್ದೇಶವಿದೆ ಎಂದರು.

ಮುಖ್ಯೋಪಾಧ್ಯಾಯೆ ರತ್ನಾ ಸಂಕಣ್ಣವರ ಮಾತನಾಡಿ, ಶಾಲೆಯು ಸಮುದಾಯದ ಪ್ರಮುಖ ಅಂಗವಾಗಿದ್ದು, ಸರ್ಕಾರಿ ಶಾಲೆಗಳಲ್ಲಿ ಪಾಲಕರ ಅಭಿಪ್ರಾಯ, ಸಲಹೆ– ಸೂಚನೆಗಳಿಗೆ ಮುಕ್ತ ಅವಕಾಶವಿದೆ. ಮಕ್ಕಳ ಕಲಿಯನ್ನೇ ಗುರಿಯಾಗಿಸಿಕೊಂಡು ಆಗಾಗ ಶಾಲೆಗಳಿಗೆ ಭೇಟಿ ನೀಡಿ ಮಕ್ಕಳ ಶೈಕ್ಷಣಿಕ ಚಿಂತನೆಗೆ ಶ್ರಮಿಸಬೇಕು. ಶಾಲೆಯೊಂದಿಗೆ ಪಾಲಕರು ಕೊಂಡಿಯಾಗಿ ಕಾರ್ಯ ನಿರ್ವಹಿಸುವಂತೆ ವಿನಂತಿಸಿದರು.

ಅಧ್ಯಕ್ಷತೆ ವಹಿಸಿದ್ದ ಶಾಲಾ ಎಸ್.ಡಿ.ಎಂ.ಸಿ ಅಧ್ಯಕ್ಷೆ ಮಂಜುಳಾ ವಡ್ಡಟ್ಟಿ ಮಾತನಾಡಿ, ನಮ್ಮ ಶಾಲೆ ನಮ್ಮ ಜವಾಬ್ದಾರಿಯಾಗಿದೆ. ಮಕ್ಕಳನ್ನು ಶಾಲೆಗೆ ಕಳುಹಿಸಿದರಷ್ಟೇ ಸಾಲದು. ಶಾಲೆಯ ಸುತ್ತ–ಮುತ್ತ ಪರಿಸರವು ಸ್ವಚ್ಛವಾಗಿರುವಂತೆ ನೋಡಿಕೊಳ್ಳುವ ಜವಾಬ್ದಾರಿ ನಮ್ಮೆಲ್ಲರ ಮೇಲಿದೆ. ಮಕ್ಕಳ ಶೈಕ್ಷಣಿಕ ಸಾಧನೆಗೆ ನಾವೆಲ್ಲರೂ ಸಹಕಾರ ಹಾಗೂ ಬೆಂಬಲ ನೀಡಬೇಕು ಎಂದರು.

ಶಾಲಾ ಭೇಟಿ, ಉತ್ತಮ ಪರಿಸರ ನಿರ್ಮಾಣ, ಶೈಕ್ಷಣಿಕ ಚಿಂತನೆಗಳಿಗೆ ಪಾಲಕರ ಸಹಕಾರ ಮುಂತಾದ ವಿಷಯಗಳ ಕುರಿತು ಚರ್ಚಿಸಲಾಯಿತು.

ಪಲ್ಲವಿ ಅಂಗಡಿ ಹಾಗೂ ಫಾತೀಮಾ ಹುಬ್ಬಳ್ಳಿ ಪ್ರಾರ್ಥಿಸಿದರು. ಎಸ್.ಜಿ. ಗಿರಿತಮ್ಮಣ್ಣವರ ಸ್ವಾಗತಿಸಿದರು. ಡಿ.ಎಸ್. ಮೀಶೆಣ್ಣವರ ನಿರೂಪಿಸಿದರು. ಜಿ.ಎಸ್. ಬೆಳಹಾರ ಸಭೆಯ ನಡಾವಳಿ ತಿಳಿಸಿದರು. ಆರ್.ಬಿ. ಹಾದಿಮನಿ ವಂದಿಸಿದರು.

ಕಾರ್ಯಕ್ರಮದಲ್ಲಿ ಮುಕ್ತುಂಸಾಬ ನಾಗನೂರ, ಅಂಜು ಸೋಳಂಕಿ, ಯಲ್ಲಪ್ಪಗೌಡ ಪಾಟೀಲ, ಪ್ರೇಮಾ ಮಣ್ಣವಡ್ಡರ, ರಜೀಯಾ ಯಾದಗಿರಿ, ರೇಶ್ಮಾ ಕಲೇಬಾವಿ, ಸಂಧ್ಯಾ ಪವಾರ, ರಜೀಯಾ ಈಟಿ, ಲಕ್ಷ್ಮಿ ಪಲ್ಲೇದ, ಸಲ್ಮಾ ಗುಡೂರ, ರೇಶ್ಮಾ ರಸಾಳಕರ, ಲಕ್ಷೀ ಪಟ್ಟೇದ, ಗೀತಾ ಕಟಗಿ, ನಿರ್ಮಲಾ ಹುಬ್ಬಳ್ಳಿ, ಎಸ್.ಡಿ.ಎಂ.ಸಿಯ ಸದಸ್ಯರು ಉಪಸ್ಥಿತರಿದ್ದರು.

**ಎಪಿಎಂಸಿ ಪ್ರಾಂಗಣದ ಗಣಪತಿ ದೇವಸ್ಥಾನ ಲೋಕಾರ್ಪಣೆ ಕಾರ್ಯಕ್ರಮದಲ್ಲಿ ನೊಣವಿನಕೆರೆ ಶ್ರೀಗಳು**

# ದೇವಸ್ಥಾನಗಳು ಧರ್ಮಮಾರ್ಗ ತೋರುವ ದೀವಿಗೆಯಂತೆ



■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ದೇವಸ್ಥಾನಗಳು ನಮ್ಮ ಧರ್ಮ, ನಂಬಿಕೆ, ಭಕ್ತಿ ಮತ್ತು ಸಂಸ್ಕೃತಿಯ ಪ್ರತೀಕವಾಗಿದ್ದು, ದೇವಸ್ಥಾನ ನಿರ್ಮಿಸುವ ಜವಾಬ್ದಾರಿಯೊಂದಿಗೆ ಇಲ್ಲಿ ನಿತ್ಯ ನಿರಂತರ ಪೂಜೆ, ಪ್ರಾರ್ಥನೆ, ಪಾವಿತ್ರ್ಯತೆ ಕಾಪಾಡುವಂತಾಗಬೇಕು ಎಂದು ನೊಣವಿನಕೆರೆ ಕಾಡಸಿದ್ದೇಶ್ವರ ಮಠದ ಡಾ. ಕರಿವೃಷಭ ದೇಶಿಕೇಂದ್ರ ಶಿವಯೋಗೀಶ್ವರ ಮಹಾಸ್ವಾಮಿಗಳು ಹೇಳಿದರು.

ಅವರು ಸೋಮವಾರ ಪಟ್ಟಣದ ಎಪಿಎಂಸಿ ಪ್ರಾಂಗಣದಲ್ಲಿ ನಿರ್ಮಾಣಗೊಂಡ ಗಣಪತಿ ದೇವಸ್ಥಾನ ಲೋಕಾರ್ಪಣೆ ನಿಮಿತ್ತ ಧಾರ್ಮಿಕ ಕಾರ್ಯಕ್ರಮ ಮತ್ತು ಧರ್ಮಸಭೆಯ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡಿದರು.

ದೇವಸ್ಥಾನಗಳು ಮನುಷ್ಯರಲ್ಲಿ ಶ್ರದ್ಧೆ, ಭಕ್ತಿ, ಧರ್ಮಮಾರ್ಗ ತೋರುವ ದೀವಿಗೆ ಮತ್ತು ಶಕ್ತಿ ಕೇಂದ್ರಗಳಾಗಿವೆ. ಲೋಕಕಲ್ಯಾಣ ಯೋಗೇಶ್ವರ ನಡೆದಾಡಿದ ದೇವರು ಲಿಂ.ವೀರಗಂಗಾಧರ ಜಗದ್ಗುರುಗಳು ತಪೋನಿಷ್ಠ ಪುಣ್ಯಭೂಮಿಯಲ್ಲಿ ಧರ್ಮದ ದುಂದುಭಿ ಸದಾ ಮೊಳಗುತ್ತಿದೆ. ಮುಕ್ತಿಮಂದಿರ ಧರ್ಮಕ್ಷೇತ್ರದಲ್ಲಿ ವೀರ ಗಂಗಾಧರ ಜಗದ್ಗುರುಗಳ ಸಂಕಲ್ಪದಂತೆ ಈಗಾಗಲೇ ತ್ರಿ-ಕೋಟಿ ಶಿವಲಿಂಗ ಪ್ರತಿಷ್ಠಾಪನಾ ಕಾರ್ಯ ಪ್ರಾರಂಭಗೊಂಡಿದೆ. ಡಿ.ಕೆ. ಶಿವಕುಮಾರ ಅವರಂತಹ ಧರ್ಮನಿಷ್ಠ ರಾಜಕಾರಣಿಗಳು ಮತ್ತು ಭಕ್ತರ ಸಹಾಯ-ಸಹಕಾರದಿಂದ 21 ಕೋಟಿ ರೂ ವೆಚ್ಚದಲ್ಲಿ ವಿಶ್ವಶ್ರೇಷ್ಠವಾದ ಕಾರ್ಯಕ್ಕೆ 6 ಕೋಟಿ ರೂ ಬಂದಿದೆ. ಈಗಾಗಲೇ ಮುಕ್ತಿಮಂದಿರ ಶ್ರೀಗಳು 5 ಸಾವಿರ ಶಿವಲಿಂಗ ಸಿದ್ದಪಡಿಸಿದ್ದಾರೆ.

ಈ ನೆಲದ ಆರಾಧ್ಯದೈವ ಶ್ರೀಸೋಮೇಶ್ವರ, ಲಿಂ.ಜಗದ್ಗುರುಗಳ ಕೃಪಾಶೀರ್ವಾದದಿಂದ ಧರ್ಮ, ನ್ಯಾಯ, ನಿಷ್ಠೆಯಿಂದ ಬದುಕುವ ಎಲ್ಲರಿಗೂ ಒಳ್ಳೆಯದೇ ಆಗಲಿದೆ. ರಾಜ್ಯದಲ್ಲಿಯೇ ಹೆಸರಾದ ಲಕ್ಷ್ಮೇಶ್ವರದ ಎಪಿಎಂಸಿ ಕೀರ್ತಿ ಇನ್ನಷ್ಟು ಬೆಳಗಲಿ. ಅನ್ನ ನೀಡುವ ಅನ್ನದಾತ, ದೇಶ ರಕ್ಷಿಸುವ ಸೈನಿಕ, ಜ್ಞಾನ ನೀಡುವ ಶಿಕ್ಷಕರನ್ನು ಎಲ್ಲರೂ ಸದಾ ಗೌರವಿಸೋಣ ಅವರ ಶ್ರೇಯಸ್ಸು ಬಯಸೋಣ. ಈ ವರ್ಷ ದೇಶದ ರೈತರು, ಸೈನಿಕರ ಶ್ರೇಯಸ್ಸು ಬಯಸೋಣ. ಉತ್ತಮ ಮಳೆ ಬೆಳೆ ಇರಲಿದೆ ಎಂದರು.

ಶಾಸಕ ಡಾ. ಚಂದ್ರು ಲಮಾಣಿ ಮಾತನಾಡಿ, ಲಕ್ಷ್ಮೇಶ್ವರದ ಎಪಿಎಂಸಿ ವ್ಯಾಪಾರಸ್ಥರು ಒಗ್ಗಟ್ಟಿನಿಂದ ಮಾಡುವ ರೈತಪರ, ಸಮಾಜಮುಖಿ ಮತ್ತು ಧಾರ್ಮಿಕ ಕಾರ್ಯಗಳು ಶ್ಲಾಘನೀಯ. ಕೋವಿಡ್ ಸಮಯದಲ್ಲಿ ಎಪಿಎಂಸಿ ವ್ಯಾಪಾರಸ್ಥರು, ರೈತರು, ಸಾರ್ವಜನಿಕರಿಗೆ ಫುಡ್ ಕಿಟ್ ವಿತರಣೆ ಮಾಡಿರುವುದು ಕಳಕಳಿಗೆ ಸಾಕ್ಷಿಯಾಗಿದೆ. ವ್ಯಾಪಾರಸ್ಥರ ಮತ್ತು ಈ ಭಾಗದ ಜನರ ಬೇಡಿಕೆಯಂತೆ ಬಂಕಾಪುರ-ಗದಗ ರಸ್ತೆ ಮೇಲ್ದರ್ಜೆಗೇರಿಸುವುದು, ಗದಗ-ಯಲವಗಿ ರೇಲ್ವೆ ಮಾರ್ಗ ಮತ್ತು ಸೇತುವೆ ಕಾರ್ಯಕ್ಕೆ ಈಗಾಗಲೇ ಸರ್ವೆಯಾಗಿದೆ ಎಂದರು.

ಮಾಜಿ ಶಾಸಕರಾದ ಜಿ.ಎಂ. ಮಹಾಂತಶೆಟ್ಟರ ಮತ್ತು ಜಿ.ಎಸ್. ಗಡ್ಡದೇವರಮಠ ಮಾತನಾಡಿ, ಪಟ್ಟಣದ ಎಪಿಎಂಸಿಯಿಂದ ಈ ವರ್ಷದಿಂದಲೇ ಮೆಕ್ಕೆಜೋಳ ಖರೀದಿಗೆ ಎಲ್ಲ ವ್ಯಾಪಾರಸ್ಥರು ಮುಂದಾಗಬೇಕು. ಇರುವ ವಿಶಾಲವಾದ ಜಾಗೆಯಲ್ಲಿ ಶೈಕ್ಷಣಿಕ ಸೇವೆಗೆ ಮುಂದಾಗಬೇಕು ಎಂದರು.

> ಮುಕ್ತಿಮಂದಿರದ ಶ್ರೀ ವಿಮಲರೇಣುಕ ವೀರಮುಕ್ತಿಮುನಿ ಶಿವಾಚಾರ್ಯ ಮಾತನಾಡಿ, ಲಕ್ಷ್ಮೇಶ್ವರದ ಎಪಿಎಂಸಿ ಲಿಂ. ವೀರಗಂಗಾಧರ ಜಗದ್ಗುರುಗಳ ಹೆಸರಿಟ್ಟಿದ್ದು ಅವರ ಕೃಪಾಶೀರ್ವಾದಿಂದ ಮಾರುಕಟ್ಟೆ ಉತ್ತರೋತ್ತರವಾಗಿ ಬೆಳೆಯುತ್ತಿದೆ. ಅವರು ಹಾಕಿಕೊಟ್ಟ ಧರ್ಮ ಮಾರ್ಗದಲ್ಲಿ ಎಲ್ಲರೂ ನಡೆಯೋಣ. ಆ.2ರಂದು ಮುಕ್ತಿಮಂದಿರ ಕ್ಷೇತ್ರದಲ್ಲಿ ಅವರ ಹೆಸರಿನ ಪ್ರಸಾದ ನಿಲಯದ ಕಟ್ಟಡ ಲೋಕಾರ್ಪಣೆಗೊಳ್ಳಲಿದೆ ಎಂದರು.

ಪ್ರಾಸ್ತಾವಿಕ ನುಡಿದ ಎಪಿಎಂಸಿ ವರ್ತಕರ ಸಂಘದ ಅಧ್ಯಕ್ಷ ಓಂಪ್ರಕಾಶ ಜೈನ್, 1945ರಲ್ಲಿ ಆರಂಭವಾದ ಎಪಿಎಂಸಿಯ ಪ್ರಗತಿಯ ಬಗ್ಗೆ ತಿಳಿಸಿದರು. ಗಂಜಿಗಟ್ಟಿಯ ಶ್ರೀ ವೈಜನಾಥ ಶಿವಲಿಂಗೇಶ್ವರ ಶಿವಾಚಾರ್ಯರು, ಕರೇವಾಡಿಮಠದ ಶ್ರೀ ಮಳೇಮಲ್ಲಿಕಾರ್ಜುನ ಶಿವಾಚಾರ್ಯರು, ಬನ್ನಿಕೊಪ್ಪದ ಶ್ರೀ ಸುಜ್ಞಾನದೇವ ಶಿವಾಚಾರ್ಯರು, ಹೂವಿನಶಿಗ್ಲಿಯ ಶ್ರೀ ಚನ್ನವೀರ ಮಹಾಸ್ವಾಮಿಗಳು ಸಾನ್ನಿಧ್ಯ ವಹಿಸಿದ್ದರು.

ಪುರಸಭೆ ಅಧ್ಯಕ್ಷೆ ಯಲ್ಲಮ್ಮ ದುರಗಣ್ಣವರ ಸೇರಿ ಗಣ್ಯರು, ಜನಪ್ರತಿನಿಧಿಗಳು, ವರ್ತಕರು ಇದ್ದರು. ವರ್ತಕರ ಸಂಘದ ಸಂಗಪ್ಪ ಹನಮಸಾಗರ, ಬಸಣ್ಣ ಅಂಗಡಿ, ವಿಜಯ ಬೂದಿಹಾಳ, ಸೋಮೇಶ ಉಪನಾಳ, ಎಸ್. ಕೆ. ಕಾಳಪ್ಪನವರ ಮತ್ತು ಶಿಕ್ಷಕ ಈಶ್ವರ ಮೆಡ್ಲೇರಿ ಕಾರ್ಯಕ್ರಮ ನಿರೂಪಿಸಿದರು. 3 ದಿನಗಳ ಕಾಲ ವಿವಿಧ ಧಾರ್ಮಿಕ, ಸಾಂಸ್ಕೃತಿಕ ಕಾರ್ಯಕ್ರಮ ಮತ್ತು ಪ್ರಸಾದ ಸೇವೆ ನಡೆಯಿತು.

## ಶಿರಹಟ್ಟಿ-ಮುಂಡರಗಿ ನೂತನ ಬಸ್




■ವಿಜಯಸಾಕ್ಷಿ ಸುದ್ದಿ, ಡಂಬಳ

ಶಿರಹಟ್ಟಿಯಿಂದ ಗ್ರಾಮೀಣ ಭಾಗಗಳ ಮಾರ್ಗವಾಗಿ ಮುಂಡರಗಿ ನಗರಕ್ಕೆ ಸರ್ಕಾರಿ ಬಸ್ ಸೇವೆ ಆರಂಭಗೊಂಡ ಹಿನ್ನೆಲೆಯಲ್ಲಿ ಹೋಬಳಿಯ ಅತ್ತಿಕಟ್ಟಿ ಗ್ರಾಮಸ್ಥರು ವಾಹನಕ್ಕೆ ಪೂಜೆ ಸಲ್ಲಿಸಿದರು.

ಗ್ಯಾರಂಟಿ ಸಮಿತಿ ಸದಸ್ಯರಾದ ರಾಮಣ್ಣ ಎಸ್.ಮೇಗಲಮನಿ ಮಾತನಾಡಿ, ತಾಂಡಾಗಳ ವಿದ್ಯಾರ್ಥಿಗಳಿಗೆ, ಕಾರ್ಮಿಕರಿಗೆ ಅನುಕೂಲವಾಗುವಂತೆ ಸ್ಪಂದಿಸಿದ ರೋಣ ಮತಕ್ಷೇತ್ರದ ಶಾಸಕ ಜಿ.ಎಸ್. ಪಾಟೀಲರನ್ನು ಗ್ರಾಮಸ್ಥರ ಪರವಾಗಿ ಅಭಿನಂದಿಸುತ್ತೇವೆ. ಸದರಿ ಬಸ್ ಸೇವೆಯನ್ನು ಆರಂಭಿಸಲು ಗದಗ ಜಿಲ್ಲಾ ಗ್ಯಾರಂಟಿ ಸಮಿತಿ ಅಧ್ಯಕ್ಷ ಬಿ.ಬಿ. ಅಸೂಟಿ, ಮುಂಡರಗಿ ಗ್ಯಾರಂಟಿ ಸಮಿತಿ ಅಧ್ಯಕ್ಷ ಡಿ.ಡಿ. ಮೋರಾನಾಳ, ಡಿಪೋ ಅಧಿಕಾರಿಗಳು ಸಹಕರಿಸಿದ್ದಾರೆ ಎಂದರು.

ಈ ಸಂದರ್ಭದಲ್ಲಿ ನಿಂಗಪ್ಪ ಮಳನ್ನವರ, ರಾಮಪ್ಪ ಹೈಗರ, ಈರಪ್ಪ ಹಿತ್ತಲಮನಿ, ರಮೇಶ ಫವಾರ, ಸೋಮೇಶ ಕಾರಬಾರಿ, ಗುಡದಪ್ಪ ತಳಗಡೆ, ಅತ್ತಿಕಟ್ಟಿ ಗ್ರಾಮದ ಹಿರಿಯರು, ಯುವಕರು, ಮಹಿಳೆಯರು ಇದ್ದರು. ಸದರಿ ಬಸ್ ಶಿರಹಟ್ಟಿ ನಗರದಿಂದ 8 ಗಂಟೆಗೆ ಹೊರಟು ಅತ್ತಿಕಟ್ಟಿ, ಡೋಣಿ ತಾಂಡ, ಡೋಣಿ, ಹೊಸಡಂಬಳ, ಡಂಬಳ, ಮೇವುಂಡಿ, ಬರದೂರ ಮೂಲಕ ಮುಂಡರಗಿ ತಲಪುವುದು. ನಂತರ ಸಂಜೆ 4.30ಕ್ಕೆ ಮುಂಡರಗಿಯಿಂದ ಹೊರಟು ಅದೇ ಮಾರ್ಗವಾಗಿ ಶಿರಹಟ್ಟಿಗೆ ತಲುಪಲಿದೆ.

## ಆವಿಷ್ಕಾರಗಳಿಂದ ತಂತ್ರಜ್ಞಾನಕ್ಕೆ ಹೊಸ ಆಯಾಮ

▶▶ಮೊದಲನೇ ಪುಟದಿಂದ

ಕಾರಕ, ನೀರಿನ ಮಟ್ಟ ಸೂಚಕ, ಬಾಗಿಲು ಎಚ್ಚರಿಕೆ ವ್ಯವಸ್ಥೆ, ಲೇಜರ್ ಭದ್ರತಾ ವ್ಯವಸ್ಥೆ, ಗಾಳಿ ಬಳಸಿ ವಿದ್ಯುತ್ ಉತ್ಪಾದನಾ ಮಾದರಿಗಳು ಗಮನ ಸೆಳೆದವು. ಇದರ ಜೊತೆ-ಗೆ ವಿದ್ಯಾರ್ಥಿಗಳಿಗೆ ಆತ್ಮರಕ್ಷಣೆ, ನೈತಿಕತೆಯ ಪಾಠಗಳೊಂದಿಗೆ ಜ್ಞಾನ ಹೆಚ್ಚಿಸಿಕೊಳ್ಳುವ ತರಬೇತಿ ನೀಡಲಾಯಿತು.

ಜಿಸಿಐಇ ಅಧ್ಯಕ್ಷ ಆರ್.ಆರ್. ಓದುಗೌಡರ, ಪ್ರಾಂಶುಪಾಲ ಜಿಯಾರುದ್ದೀನ ಶೇಖ್, ಆಡಳಿತ ಅಧಿಕಾರಿ ಸಂಗಪ್ಪ ಜೋಡಳ್ಳಿ, ತರಬೇತಿ ಅಧಿಕಾರಿಗಳಾದ ಮಂಜುನಾಥ ಕಣವಿ, ಮಧು ಪಾಟೀಲ, ಫಕ್ಕೀರಪ್ಪ ಮರಡಿ, ಸೌಮ್ಯ ಪಾಟೀಲ, ಮೈತ್ರಾ ಭಜಂತ್ರಿ, ಯೂನೂಸ್ ವಂಟಮುರಿ ಹಾಗೂ ನಿರ್ವಹಣಾ ಸಮಿತಿ ಸದಸ್ಯರು ಪಾಲ್ಗೊಂಡಿದ್ದರು.

## ಪ್ರಾಮಾಣಿಕತೆ ಮೆರೆದ ಆಟೋ ಚಾಲಕ: "ಸಮುದಾಯ ರಕ್ಷಕ" ಪ್ರಶಸ್ತಿ ಕೊಟ್ಟು ಗೌರವಿಸಿದ ಪೊಲೀಸರು!



■ವಿಜಯಸಾಕ್ಷಿ ಸುದ್ದಿ, ಗದಗ

ರಸ್ತೆಯಲ್ಲಿ 10ರೂ ಸಿಕ್ಕರೆ ಸಾಕು ಎತ್ತಿ ಜೇಬಿಗೆ ಇಳಿಸುವ ಈಗಿನ ಕಾಲದಲ್ಲಿ 50 ಸಾವಿರ ಹಾಗೂ ಮಹತ್ವದ ಕಾಗದ ಪತ್ರಗಳಿದ್ದ ಬ್ಯಾಗ್ ಅನ್ನು ವಾರಸುದಾರರಿಗೆ ಹಿಂದಿರುಗಿಸುವಲ್ಲಿ ಪ್ರಾಮಾಣಿಕತೆ ಮೆರೆದ ಆಟೋ ಚಾಲಕನ ಕಾರ್ಯಕ್ಕೆ ಮೆಚ್ಚುಗೆ ವ್ಯಕ್ತಪಡಿಸಿ ಪೊಲೀಸ್ ಇಲಾಖೆ "ಸಮುದಾಯ ರಕ್ಷಕ " ಪ್ರಶಸ್ತಿ ನೀಡಿ ಗೌರವಿಸಿದೆ.

ಸಯ್ಯದ್ ಹುಸೇನ್ ಇಮಾಮುದ್ದೀನ್ ಮುಲ್ಲಾ ಅವರೇ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ರೋಹನ್ ಜಗದೀಶ್ ಅವರಿಂದ ಗೌರವ ಪಡೆದ ಆಟೋ ಚಾಲಕ.

ಸೋಮವಾರ ಎಸ್ಪಿ ಕಚೇರಿಯ ಸಭಾಂಗಣದಲ್ಲಿ ಜಿಲ್ಲಾ ಪೊಲೀಸ್ ಇಲಾಖೆಯಿಂದ "ಸಮುದಾಯ ರಕ್ಷಕ" ಪ್ರಶಂಸನಾ ಪತ್ರ ನೀಡಿ ಗೌರವಿಸಲಾಯಿತು. ಜುಲೈ 25ರಂದು ಬೆಟಗೇರಿ ಬಡಾವಣೆ ಠಾಣಾ ವ್ಯಾಪ್ತಿಯ ಶ್ರೀ ಸಾಯಿಬಾಬಾ ದೇವಸ್ಥಾನದಿಂದ ಹಳೆ ಬಸ್ ನಿಲ್ದಾಣದ ಕಡೆಗೆ ಹೋಗುವಾಗ ಶ್ರೀ ಸಾಯಿ ಬಾಬಾ ದೇವಸ್ಥಾನದ ರಸ್ತೆಯ ಪಕ್ಕದಲ್ಲಿ ಗದಗ ತಾಲೂಕಿನ ನೀರಲಗಿ ಗ್ರಾಮದ ರವಿ ಈರಪ್ಪ ವಾಲ್ಮೀಕಿ ಇವರು ತಮ್ಮ ಬ್ಯಾಗನ್ನು ಕಳೆದುಕೊಂಡಿದ್ದರು. ರಸ್ತೆಯಲ್ಲಿ ಬ್ಯಾಗ್ ಬಿದ್ದಿದ್ದನ್ನು ಗಮನಿಸಿದ ಆಟೋ ಚಾಲಕ ಸಯ್ಯದ್ ಹುಸೇನ್ ಅವರು ಬೆಟಗೇರಿ ಬಡಾವಣೆ ಪೊಲೀಸ್ ಠಾಣೆಗೆ ನೀಡುವ ಮೂಲಕ ತಮ್ಮ ಪ್ರಾಮಾಣಿಕತೆಯನ್ನು ಮೆರೆದಿದ್ದರು.

ಸಾರ್ವಜನಿಕರಿಗೆ ಮತ್ತು ಪೊಲೀಸ್ ಇಲಾಖೆಗೆ ಆಟೋ ಚಾಲಕನ ಈ ಪ್ರಾಮಾಣಿಕತೆ ನೆರವಾಯಿತು. ಹೀಗಾಗಿ ಆಟೋ ಚಾಲಕ ಸಯ್ಯದ್ ಹುಸೇನ್ ಅವರಿಂದ ಮುಂದೆಯೂ ಇದೇ ರೀತಿ ಇಲಾಖೆಯೊಂದಿಗೆ ಸಹಾಯ, ಸಹಕಾರವನ್ನು ನೀಡಲು ಸೈಯದ್ ಹುಸೇನ್ ಅವರಿಗೆ "ಸಮುದಾಯ ರಕ್ಷಕ" ಪ್ರಶಸ್ತಿ ನೀಡಿ ಗೌರವಿಸಲಾಯಿತು. ಆಟೋ ಚಾಲಕನ ಪ್ರಾಮಾಣಿಕತೆಗೆ ಎಸ್ಪಿ ರೋಹನ್ ಜಗದೀಶ್ ಪ್ರಶಂಸೆ ವ್ಯಕ್ತಪಡಿಸಿದ್ದಾರೆ.

## ಸಾರ್ವಜನಿಕರ ಗಮನಕ್ಕೆ

■ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲೆಯ ಗಜೇಂದ್ರಗಡ ಪಟ್ಟಣದ ಸಾರ್ವಜನಿಕರಿಗೆ ತಿಳಿಸುವುದೇನೆಂದರೆ, ಗಜೇಂದ್ರಗಡ ಪುರಸಭೆ ವ್ಯಾಪ್ತಿಯಲ್ಲಿ ಬರುವ ಪುರಸಭೆ ಮಾಲ್ಕಿ ನಾಗರಿಕ ಸೌಲಭ್ಯಕ್ಕೆ ಕಾಯ್ದಿರಿಸಿದ ರಿ.ಸ.ನಂ. 282/1/5 / ಟಿ.ಎಂ.ಸಿ.ನಂ.9923 ಪ್ಲಾಟ್ ನಂ. 29, ಜಾಗೆಯನ್ನು ಉಪ ನಿರ್ದೇಶಕರ ಕಾರ್ಯಾಲಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಗೆ ಮಂಜೂರಿಸಲು ಕರ್ನಾಟಕ ಪುರಸಭೆಗಳ ಅಧಿನಿಯಮ 1964 (72) ಹಾಗೂ ಸರ್ಕಾರದ ಅಧಿಸೂಚನೆಯನ್ವಯ ಪುರಸಭೆ ಸಾಮಾನ್ಯ ಸಭೆಯಲ್ಲಿ ಜರುಗಿದಂತೆ 30 ವರ್ಷದ ಅವಧಿಗೆ ಮೀರದ ಹಾಗೆ ಲೀಸ್ ಆಧಾರದ ಮೇಲೆ ನಿವೇಶನಗಳನ್ನು ಉದ್ಯೋಗಸ್ಥ ಮಹಿಳೆಯರ ವಸತಿ ಕಟ್ಟಡ ನಿರ್ಮಾಣಕ್ಕೆ ನಿವೇಶನ ಹಂಚಿಕೆ ಮಾಡಲು ಸಭೆಯಲ್ಲಿ ನಿರ್ಣಯಿಸಲಾಗಿದೆ. ಈ ಕುರಿತು ಸಲಹೆ/ ಸೂಚನೆ/ ಆಕ್ಷೇಪಣೆಗಳಿದ್ದಲ್ಲಿ ಈ ಪ್ರಕಟಣೆಗೊಂಡ 7 ದಿವಸ ದೊಳಗೆ ಲಿಖಿತವಾಗಿ ಗಜೇಂದ್ರಗಡ ಪುರಸಭೆ ಸಲ್ಲಿಸಬಹುದಾಗಿದೆ ಎಂದು ಗಜೇಂದ್ರಗಡ ಪುರಸಭೆ ಕಾರ್ಯಾಲಯದ ಪ್ರಕಟಣೆ ತಿಳಿಸಿದೆ.

## ಭಕ್ತಿ ಭಾವದ ನಾಗ ಪೂಜೆ



■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ನಾಗರ ಚೌತಿ ಹಬ್ಬದ ನಿಮಿತ್ತ ಸೋಮವಾರ ನರೇಗಲ್ಲ ಹೋಬಳಿಯಾದ್ಯಂತ ನಾರಿಯರು ನಾಗಪ್ಪನಿಗೆ ಹಾಲೆರೆದು ತಮ್ಮ ಭಕ್ತಿ ಮೆರೆದರು. ಮಹಿಳೆಯರು ತಲೆಗೆ ಸಸಿ ಮತ್ತು ಹೂ ಮುಡಿದು, ಆಭರಣಗಳನ್ನು ಧರಿಸಿ, ಹೊಸ ಸೀರೆಗಳನ್ನುಟ್ಟು ಮಕ್ಕಳು ಹಾಗೂ ಕುಟುಂಬ ಸಮೇತರಾಗಿ ಉತ್ಸಾಹದಿಂದ ಬಂದು ನಾಗಪ್ಪನಿಗೆ ಹಾಲೆರೆದರು. ಈ ವರ್ಷದ ಮಳೆ ಬೆಳೆ ಸಮೃದ್ಧವಾಗಲಿ, ವರ್ಷಪೂರ್ತಿ ಯಾವದೇ ಅಪಾಯ ಬಾರದಂತೆ ರಕ್ಷಿಸು ಎಂದು ಇಷ್ಟಾರ್ಥಗಳನ್ನು ಬೇಡಿಕೊಂಡರು.

ಈ ವೇಳೆ ಕೆಲವು ಹೆಣ್ಣು ಮಕ್ಕಳು ಅಣ್ಣ-ತಮ್ಮಂದಿರ ಆಯುಷ್ಯ ಹೆಚ್ಚಾಗಲೆಂದು ಉಪವಾಸ ವೃತ ಕೈಗೊಂಡರು. ಮನೆಯಲ್ಲಿ ತಯಾರಿಸಿದ ಕುಚ್ಚಿದಕಡುಬು, ಅಳ್ಳಿಟ್ಟು, ನೆನಸಿದ ಕಡಲೆಕಾಳು, ಗೆಜ್ಜೆವಸ್ತ್ರ, ತೆಂಗಿನಕಾಯಿ ಸೇರಿದಂತೆ ಇತರ ಪೂಜಾ ಸಾಮಗ್ರಿಗಳೊಂದಿಗೆ ನಾಗಪ್ಪನನ್ನು ಪೂಜಿಸಿ ಧನ್ಯತೆ ಪಡೆದರು.

ಸಣ್ಣ ಮಕ್ಕಳು ಮನೆಯಲ್ಲಿ ಕಟ್ಟಿದ್ದ ಜೋಕಾಲಿಯಾಡಿ ನಲಿದರು.

## ಕರ್ನಾಟಕದಲ್ಲಿ ರಸಗೊಬ್ಬರದ ಕೊರತೆಯಿಲ್ಲ, ಸರಿಯಾದ ಕ್ರಮದಲ್ಲಿ ಬಳಸಬೇಕು: ಜೋಶಿ

■ವಿಜಯಸಾಕ್ಷಿ ಸುದ್ದಿ, ನವದೆಹಲಿ

ಕರ್ನಾಟಕದಲ್ಲಿ ರಸಗೊಬ್ಬರದ ಕೊರತೆಯಿಲ್ಲ, ಸರಿಯಾದ ಕ್ರಮದಲ್ಲಿ ಬಳಸಬೇಕು ಎಂದು ಕೇಂದ್ರ ಸಚಿವ ಪ್ರಹ್ಲಾದ್ ಜೋಶಿ ಹೇಳಿದ್ದಾರೆ.

ಈ ಸಂಬಂಧ ಸಾಮಾಜಿಕ ಜಾಲತಾಣಗಳಲ್ಲಿ ಪೋಸ್ಟ್ ಮಾಡಿರುವ ಜೋಶಿ, ಕೇಂದ್ರ ಸರ್ಕಾರ ರಸಗೊಬ್ಬರ ಕಳುಹಿಸಿಲ್ಲ ಎಂಬ ರಾಜ್ಯ ಸರ್ಕಾರದ ಟೀ-ಕೆಯ ಬೆನ್ನಲ್ಲೇ ಕರ್ನಾಟಕದಲ್ಲಿ ರಸಗೊಬ್ಬರದ ಅಭಾವವಿಲ್ಲ ಎಂದರು. ಕೇಂದ್ರ ಸರ್ಕಾರದಿಂದ ಸರಬರಾಜು ಆಗಿರುವ ರಸಗೊಬ್ಬರಗಳಲ್ಲಿ 1.65 ಲಕ್ಷ ಮೆಟ್ರಿಕ್ ಟನ್ ರಸಗೊಬ್ಬರವನ್ನು ಸಂಗ್ರಹಣೆ ಮಾಡಲಾಗಿದೆ. ರೈತರಿಗೆ ಬೇಕಾದ ರಸಗೊಬ್ಬರಗಳನ್ನು ರಾಜ್ಯ ಸರ್ಕಾರಕ್ಕೆ ಈಗಾಗಲೇ ನೀಡಲಾಗಿದ್ದು, ಸರಿಯಾದ ಕ್ರಮದಲ್ಲಿ ಬಳಸಬೇಕಿದೆ ಎಂದು ತಿಳಿಸಿದ್ದಾರೆ.

ರಸಗೊಬ್ಬರದ ಬೇಡಿಕೆ ಹೆಚ್ಚಿದ್ದು, ಅಗತ್ಯ ರಸಗೊಬ್ಬರಗಳನ್ನು ಕರ್ನಾಟಕಕ್ಕೆ ಸರಬರಾಜು ಮಾಡುವಂತೆ ಕೋರಿ ಇಂದು ರಾಜ್ಯದ ಎಲ್ಲಾ ಬಿಜೆಪಿ ಸಂಸದರು ಕೇಂದ್ರ ರಾಸಾಯನಿಕ ಹಾಗೂ ರಸಗೊಬ್ಬರಗಳ ಸಚಿವರಾದ ಜೆಪಿ ನಡ್ಡಾ ಅವರನ್ನು ಭೇಟಿಯಾಗಿ ಮನವಿಯನ್ನು ಸಲ್ಲಿಸಲಾಗಿದೆ ಎಂದು ಹೇಳಿದರು. ನರೇಂದ್ರ ಮೋದಿ ನೇತೃತ್ವದ ಸರ್ಕಾರ ದೇಶದ ರೈತರ ಬೆನ್ನೆಲುಬಾಗಿ ನಿಂತಿದ್ದು, ಎಂತಹದ್ದೇ ಸಮಯದಲ್ಲೂ ರೈತರ ಹಿತ ಕಾಪಾಡುವುದು ನಮ್ಮ ಸರ್ಕಾರದ ಧ್ಯೇಯವಾಗಿದೆ. ಸಂಸದರ ಮನವಿಗೆ ಸಕಾರಾತ್ಮಕವಾಗಿ ಸ್ಪಂದಿಸಿರುವ ಕೇಂದ್ರ ರಾಸಾಯನಿಕ ಹಾಗೂ ರಸಗೊಬ್ಬರಗಳ ಸಚಿವರಾದ ಜೆಪಿ ನಡ್ಡಾ ಅವರಿಗೆ ಅನಂತ ಧನ್ಯವಾದಗಳು ಎಂದಿದ್ದಾರೆ.

## ದೇಶದ ಅಭಿವೃದ್ಧಿಗೆ ಕೈಜೋಡಿಸಿ



■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ/ಶಿಗ್ಲಿ

ತಂತ್ರಜ್ಞಾನದ ಶಿಕ್ಷಣವು ಇಂದು ಆಧುನಿಕ ಜಗತ್ತನ್ನು ಆಳುತ್ತಿದ್ದು, ಇದರ ಪರಿಕಲ್ಪನೆಯೊಂದಿಗೆ ವಿದ್ಯಾರ್ಥಿಗಳು ಕಠಿಣ ಪರಿಶ್ರಮ, ಶ್ರದ್ಧೆ, ಏಕಾಗ್ರತೆ ರೂಢಿಸಿಕೊಂಡು ಸತತಾಭ್ಯಾಸದ ಮೂಲಕ ಉನ್ನತ ಗುರಿ ಸಾಧಿಸಬೇಕು ಎಂದು ಶಾಸಕ ಡಾ. ಚಂದ್ರು ಲಮಾಣಿ ಹೇಳಿದರು.

ಅವರು ಶಿಗ್ಲಿಯ ಪರಮೇಶ್ವರಪ್ಪ ಬಳಿಗಾರ ಸರ್ಕಾರಿ ಪ.ಪೂ ಕಾಲೇಜಿನಲ್ಲಿ ಪ್ರಸಕ್ತ ಸಾಲಿನ ವಿವಿಧ ಚಟುವಟಿಕೆಗಳ ಉದ್ಘಾಟನೆ, ಪ್ರಥಮ ಪಿಯು ವಿದ್ಯಾರ್ಥಿಗಳ ಸ್ವಾಗತ ಹಾಗೂ ಬಳಿಗಾರ ಕುಟುಂಬದಿಂದ ಕೊಡಮಾಡುವ 1 ಲಕ್ಷ ರೂ ಪ್ರತಿಭಾ ಪುರಸ್ಕಾರ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

ಇಂದಿನ ಸ್ಪರ್ಧಾತ್ಮಕ ಜಗತ್ತಿನಲ್ಲಿ ವಿದ್ಯಾರ್ಥಿಗಳು ಆಯ್ದುಕೊಂಡ ಕ್ಷೇತ್ರದಲ್ಲಿ ಶ್ರೇಷ್ಠವಾದುದನ್ನು ಸಾಧಿಸಲು ಏಕಾಗ್ರತೆಯಿಂದ ಶ್ರಮಿಸಬೇಕು. ನಮ್ಮ ಭವಿಷ್ಯದ ರೂವಾರಿಗಳು ನಾವೇ ಆಗಿದ್ದು, ಉನ್ನತ ಶಿಕ್ಷಣ, ಜ್ಞಾನ ಮತ್ತು ನಾಯಕತ್ವದ ಗುಣ ಬೆಳೆಸಿಕೊಂಡು ಸಮಾಜಮುಖಿಯಾಗಿ ದೇಶದ ಅಭಿವೃದ್ಧಿಗೆ ಕೈಜೋಡಿಸಬೇಕು ಎಂದರು.

ಜಿ.ಪಂ ಮಾಜಿ ಅಧ್ಯಕ್ಷ ಎಸ್.ಪಿ. ಬಳಿಗಾರ ಮಾತನಾಡಿ, ವಿದ್ಯೆಯ ಜೊತೆಗೆ ವಿನಯವು ವಿದ್ಯಾರ್ಥಿಗಳಲ್ಲಿ ಅವಶ್ಯಕವಾಗಿ ಬೆಳೆದು ಬರಬೇಕು. ಗುರು-ಹಿರಿಯರು, ತಂದೆ-ತಾಯಿಯರನ್ನು ಗೌರವದಿಂದ ಕಾಣಬೇಕು. ಉಜ್ವಲ ಭವಿಷ್ಯಕ್ಕಾಗಿ ವಿದ್ಯಾರ್ಥಿಗಳು ಶೈಕ್ಷಣಿಕ ಹಂತದಲ್ಲಿ ಸಾಧನೆಯ ತುಡಿತದತ್ತ ಸಾಗಬೇಕು. ವಿದ್ಯಾರ್ಥಿ ಮತ್ತು ಯುವ ಶಕ್ತಿ ನಾಡಿನ ಸಂಪತ್ತಾಗಿದ್ದು, ಅದನ್ನು ಸದುಪಯೋಗಪಡಿಸಿಕೊಳ್ಳುವುದು ವಿದ್ಯಾರ್ಥಿಗಳ ಕರ್ತವ್ಯವಾಗಿದೆ ಎಂದರು.

ಕಾಲೇಜಿನ ಪ್ರಾಚಾರ್ಯ ಎಸ್.ಟಿ. ಮುದಿಗೌಡರ ಅಧ್ಯಕ್ಷತೆ ವಹಿಸಿ ಮಾತನಾಡಿದರು. ಅತಿಥಿಗಳಾಗಿ ನಾಗರಾಜ ದ್ಯಾಮನಕೊಪ್ಪ, ಎನ್.ಎನ್. ನೆಗಳೂರ, ನಿವೃತ್ತ ಪ್ರಾಚಾರ್ಯ ಡಿ.ಪಿ. ಹೇಮಾದ್ರಿ, ಭರತ್ ಬಳಿಗಾರ, ಮಂಜುನಾಥ ದೇಸಾಯಿ, ಶ್ರೀನಿವಾಸ ಬದಾಮಿ, ನಟರಾಜ ಪವಾಡದ, ರವಿ ಕುಸನೂರ, ಗೋವಿಂದಸಾ ಬದಿ, ಬಸವರಾಜ ಡಂಬ್ರಳ್ಳಿ, ಮಾಂತೇಶ ತಳವಾರ ಸೇರಿ ಕಾಲೇಜು ಅಭಿವೃದ್ಧಿ ಸಮಿತಿ ಸದಸ್ಯರು, ಉಪನ್ಯಾಸಕರು ಇದ್ದರು.

**ರಸಗೊಬ್ಬರ ಪೂರೈಕೆಗೆ ರಾಜ್ಯದಿಂದ ಕೇಂದ್ರಕ್ಕೆ ಆರು ಬಾರಿ ಮನವಿ**

## ರಾಜ್ಯದಲ್ಲಿ ರಸಗೊಬ್ಬರ ಕೊರತೆ ನೀಗಿಸಲು ಅಗತ್ಯ ಕ್ರಮ

■ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಕೇಂದ್ರ ಸರ್ಕಾರದಿಂದ ಕಳೆದ ಮೂರು ವರ್ಷಗಳಲ್ಲಿ ಆರಂಭಿಕ ಶುಲ್ಕವನ್ನು ಪರಿಗಣಿಸದೇ ಯೂರಿಯಾ ಸೇರಿದಂತೆ ಎಲ್ಲಾ ರಸಗೊಬ್ಬರಗಳನ್ನು ಬೇಡಿಕೆಗೆ ಅನುಗುಣವಾಗಿ ಹಂಚಿಕೆ ಮತ್ತು ಸರಬರಾಜು ಮಾಡಲಾಗಿದೆ. ಇದರಿಂದಾಗಿ ರಾಜ್ಯದಲ್ಲಿ ಯಾವುದೇ ರೀತಿಯ ರಸಗೊಬ್ಬರದ ಕೊರತೆ ಕಂಡು ಬಂದಿರುವುದಿಲ್ಲ ಎಂದು ಕೃಷಿ ಇಲಾಖೆ ಪ್ರಕಟಣೆ ತಿಳಿಸಿದೆ.

ಪ್ರಸಕ್ತ ಸಾಲಿನಲ್ಲಿ ಮಾತ್ರ ಆರಂಭಿಕ ಶುಲ್ಕ ಪರಿಗಣಿಸಿ, ಕೇಂದ್ರ ಸರ್ಕಾರದಿಂದ ರಸಗೊಬ್ಬರ ಹಂಚಿಕೆ ಮತ್ತು ಸರಬರಾಜು ಪ್ರಕ್ರಿಯೆ ಜರುಗಿಸಲಾಗುತ್ತಿದೆ. ಇದರಿಂದಾಗಿ ರಾಜ್ಯದಲ್ಲಿ ಯೂರಿಯಾ ರಸಗೊಬ್ಬರದ ಪ್ರಾರಂಭಿಕ ದಾಸ್ತಾನನ್ನು ಪರಿಗಣಿಸಿ, ಯೂರಿಯಾ ರಸಗೊಬ್ಬರದ ಕಡಿಮೆ ಹಂಚಿಕೆ ಮಾಡಿರುವುದು ಕೊರತೆಗೆ ಮೂಲ ಕಾರಣವಾಗಿದೆ.




ರಾಜ್ಯದ ಬೆಳೆ ಪದ್ಧತಿಯನ್ನು ಆಧರಿಸಿ ಮುಂಗಾರು ಹಂಗಾಮಿಗೆ ಮುಂಚಿತವಾಗಿ ಕೇಂದ್ರ ಸರ್ಕಾರಕ್ಕೆ 12.95 ಲಕ್ಷ ಮೆ.ಟನ್ ಯೂರಿಯಾ ರಸಗೊಬ್ಬರದ ಬೇಡಿಕೆ ಸಲ್ಲಿಸಲಾಗಿತ್ತು. ಆದರೆ, ಕೇಂದ್ರ ಸರ್ಕಾರದಿಂದ 11.17 ಲಕ್ಷ ಮೆ. ಟನ್ ಹಂಚಿಕೆ ನಿಗದಿಪಡಿಸಲಾಗಿದೆ. ಏಪ್ರಿಲ್ ಮಾಹೆಯಿಂದ ಜುಲೈ ಮಾಹೆಯವರೆಗೆ 3.02ಲಕ್ಷ ಮೆ.ಟನ್ ಡಿ.ಎ.ಪಿ ರಸಗೊಬ್ಬರದ ಬೇಡಿಕೆ ಇದ್ದು, ಕೇಂದ್ರ ಸರ್ಕಾರದಿಂದ ಇಲ್ಲಿಯವರೆಗೆ 2.21 ಲಕ್ಷ ಮೆ. ಟನ್ ಸರಬರಾಜಾಗಿದ್ದು, ಇನ್ನೂ 81,000 ಮೆ.ಟನ್ ಸರಬರಾಜು ಬಾಕಿ ಇದೆ. ರಾಜ್ಯದಲ್ಲಿ ಡಿ.ಎ.ಪಿ. ಕೊರತೆ ಕಂಡುಬಂದಾಗ ಕೃಷಿ ಸಚಿವರ ನಿರ್ದೇಶನದಂತೆ ಪರ್ಯಾಯ ರಸಗೊಬ್ಬರಗಳ ಬಳಕೆ ಕುರಿತು ರೈತರಲ್ಲಿ ಅರಿವು ಮೂಡಿಸಿ, ಪ್ರಸ್ತುತ, ಡಿ.ಎ.ಪಿ. ರಸಗೊಬ್ಬರದ ಕೊರತೆಯನ್ನು ನೀಗಿಸಲಾಗಿದೆ. ಏಪ್ರಿಲ್ ಮಾಹೆಯಿಂದ ಜುಲೈ ಮಾಹೆಯವರೆಗೆ 6.80ಲಕ್ಷ ಮೆ. ಟನ್ ಯೂರಿಯಾ ರಸಗೊಬ್ಬರದ ಬೇಡಿಕೆ ಇದೆ. ಕೇಂದ್ರ ಸರ್ಕಾರದಿಂದ ಇಲ್ಲಿಯವರೆಗೆ 5.35 ಲಕ್ಷ ಮೆ. ಟನ್ ಸರಬರಾಜಾಗಿದ್ದು, ಇನ್ನೂ 1.45 ಲಕ್ಷ ಮೆ.ಟನ್ ಸರಬರಾಜು ಬಾಕಿ ಇದೆ. ಕೇಂದ್ರ ರಸಗೊಬ್ಬರ ಇಲಾಖೆಯ ಅಧಿಕಾರಿಗಳಿಗೆ ಕೃಷಿ ಇಲಾಖೆ ವತಿಯಿಂದ ಏಪ್ರಿಲ್ ಮಾಹೆಯಿಂದ ಇಲ್ಲಿಯವರೆಗೆ ಆರು ಬಾರಿ ಪತ್ರಗಳನ್ನು ಬರೆದು ಹಂಚಿಕೆಗೆ ಅನುಗುಣವಾಗಿ ಅವಶ್ಯವಿರುವ ಡಿ.ಎ.ಪಿ ಮತ್ತು ಯೂರಿಯಾ ರಸಗೊಬ್ಬರಗಳ ಪೂರೈಕೆ ಮಾಡಲು ಮನವಿ ಮಾಡಲಾಗಿದೆ.

ರಾಜ್ಯದ ಕೃಷಿ ಸಚಿವರು ಕೇಂದ್ರ ಸರ್ಕಾರದ ರಸಗೊಬ್ಬರ ಖಾತೆ ಸಚಿವರಿಗೆ ಅಗತ್ಯವಿರುವ ಡಿ.ಎ.ಪಿ ರಸಗೊಬ್ಬರದ ಪೂರೈಕೆಗೆ ಪತ್ರ ಮುಖೇನ ಮನವಿ ಸಲ್ಲಿಸಿದ್ದಾರೆ. ಅಲ್ಲದೇ, ಕೃಷಿ ಸಚಿವರೇ ಖುದ್ದಾಗಿ, ಕೇಂದ್ರ ಸರ್ಕಾರದ ಕೃಷಿ ಮತ್ತು ರೈತರ ಕಲ್ಯಾಣ ಸಚಿವರನ್ನು ಭೇಟಿ ಮಾಡಿ ಕೇಂದ್ರ ಸರ್ಕಾರದಿಂದ ಸಕಾಲದಲ್ಲಿ ಅಗತ್ಯವಿರುವ ರಸಗೊಬ್ಬರಗಳ ಪೂರೈಕೆ ಮಾಡಲು ಮನವಿ ಮಾಡಿದ್ದಾರೆ.

ಯೂರಿಯಾ ರಸಗೊಬ್ಬರಕ್ಕೆ ಪರ್ಯಾಯವಾಗಿ ಪರಿಸರ ಸ್ನೇಹಿಯಾಗಿರುವ ನ್ಯಾನೋ ರಸಗೊಬ್ಬರ ಬಳಕೆಗೆ ಇಲಾಖೆಯಿಂದ ವ್ಯಾಪಕ ಪ್ರಚಾರ ನೀಡಿ ಅರಿವು ಮೂಡಿಸಲಾಗುತ್ತಿದೆ. ಬೆಳೆ, ಮಣ್ಣು, ಮಾನವ, ಜಾನುವಾರು ಮತ್ತು ಪರಿಸರದ ಆರೋಗ್ಯದ ದೃಷ್ಟಿಯಿಂದ ಯೂರಿಯಾ ಬಳಕೆಯನ್ನು ಕಡಿತಗೊಳಿಸಲು ರೈತರಲ್ಲಿ ಮನವಿ ಮಾಡಲಾಗಿದೆ.

> ರಾಜ್ಯದಲ್ಲಿ ಮುಂಗಾರು ಹಂಗಾಮಿನಲ್ಲಿ ಮುಂಚಿತವಾಗಿ ಉತ್ತಮ ಮಳೆಯಾಗಿದ್ದು, ಸಾಮಾನ್ಯ ಅವಧಿಗಿಂತ ಮುಂಚೆ ಬಿತ್ತನೆ ಪ್ರಾರಂಭವಾಗಿದೆ. ಇಲ್ಲಿಯವರೆಗೆ ಬಿತ್ತನೆ ವಿಸ್ತೀರ್ಣ ಹಿಂದಿನ ಸಾಲಿಗೆ ಹೋಲಿಸಿದಲ್ಲಿ ಹೆಚ್ಚಾಗಿದೆ. ತುಂಗಭದ್ರಾ, ಕೃಷ್ಣಾ, ಕಾವೇರಿ ಇತ್ಯಾದಿ ಪ್ರಮುಖ ಜಲಾಶಯಗಳಿಂದ ಅವಧಿಗಿಂತ ಮುಂಚಿತವಾಗಿ ಅಚ್ಚುಕಟ್ಟು ಪ್ರದೇಶಗಳಿಗೆ ನೀರನ್ನು ಬಿಟ್ಟಿರುವುದರಿಂದ ಮುಂಚಿತವಾಗಿ ನಾಟಿ ಕೈಗೊಳ್ಳಲಾಗಿರುವುದು ಯೂರಿಯಾ ಮತ್ತು ರಸಗೊಬ್ಬರ ಬೇಡಿಕೆ ಪ್ರಮುಖ ಕಾರಣವಾಗಿದೆ.



ಲಕ್ಷ್ಮೇಶ್ವರ ಸಮೀಪದ ಮುಕ್ತಿಮಂದಿರ ಧರ್ಮಕ್ಷೇತ್ರದಲ್ಲಿ ಬಳ್ಳಾರಿ ಮೂಲದ ಡಾ. ಎನ್. ಶಿವರುದ್ರಗೌಡ್ರ ಅವರು ನೊಣವಿನಕೆರೆ ಕಾಡಸಿದ್ದೇಶ್ವರ ಮಠಕ್ಕೆ ತಮ್ಮ 2 ಎಕರೆ ಜಮೀನನ್ನು ದಾನ ಮಾಡಿದರು. ನೊಣವಿನಕೆರೆ ಶ್ರೀಗಳು ಜಮೀನುದಾನ ಪತ್ರ ಸ್ವೀಕರಿಸಿದರು. ಈ ಸಂದರ್ಭದಲ್ಲಿ ಮುಕ್ತಿಮಂದಿರ ಶ್ರೀಗಳಿದ್ದರು.



ಲಕ್ಷ್ಮೇಶ್ವರ ಸಮೀಪದ ಹೂವಿನಶಿಗ್ಲಿಯ ಗುರುಕುಲ ಆಶ್ರಮದ ತ್ರಿವಿಧ ದಾಸೋಹ ಸೇವೆಗೆ ಪಟ್ಟಣದ ಸಾತ್ವಿಕ ಜೀವಿ ಬಸಣ್ಣ ಗಾಂಜಿ ಅವರು ತಮ್ಮ ತಂದೆಯ ಸ್ಮರಣಾರ್ಥ 1,11,111 ರೂಗಳನ್ನು ದೇಣಿಗೆ ನೀಡಿದರು. ಶ್ರೀಮಠದ ಚನ್ನವೀರ ಮಹಾಸ್ವಾಮಿಗಳು ದಾನಿಗಳನ್ನು ಗೌರವಿಸಿದರು.


**ಪತ್ರಿಕಾಗೋಷ್ಠಿಯಲ್ಲಿ ಬಿಜೆಪಿ ರೈತ ಮೋರ್ಚಾ ರಾಜ್ಯಾಧ್ಯಕ್ಷ ಎ.ಎಸ್. ಪಾಟೀಲ ನಡಹಳ್ಳಿ ಆರೋಪ**

# ಕಾಳಸಂತೆಯಲ್ಲಿ ಯೂರಿಯಾ ಗೊಬ್ಬರ ಮಾರಾಟ

**■ವಿಜಯಸಾಕ್ಷಿ ಸುದ್ದಿ, ಗದಗ**

ಕೇಂದ್ರ ಸರಕಾರ ಪೂರೈಸಿದ ರಸಗೊಬ್ಬರವನ್ನು ರೈತರಿಗೆ ವ್ಯವಸ್ಥಿತವಾಗಿ ಹಂಚಿಕೆ ಮಾಡಬೇಕಾದ ರಾಜ್ಯ ಸರಕಾರ, 25 ಲಕ್ಷ ಮೆಟ್ರಿಕ್ ಟನ್ ಯೂರಿಯಾ ಗೊಬ್ಬರವನ್ನು ಕಾಳಸಂತೆಯಲ್ಲಿ ಮಾರಾಟ ಮಾಡಿದೆ ಎಂದು ಬಿಜೆಪಿ ರೈತ ಮೋರ್ಚಾ ರಾಜ್ಯಾಧ್ಯಕ್ಷ ಎ.ಎಸ್. ಪಾಟೀಲ ನಡಹಳ್ಳಿ ಆರೋಪಿಸಿದರು.

ಸೋಮವಾರ ನಗರದ ಪತ್ರಿಕಾ ಭವನದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಯೂರಿಯಾ ಗೊಬ್ಬರವನ್ನು ಕಾಳಸಂತೆಯಲ್ಲಿ ಮಾರಾಟ ಮಾಡುತ್ತಿರುವ ರಾಜ್ಯ ಸರಕಾರದ ವಿರುದ್ಧ ಬಿಜೆಪಿ ಪ್ರತಿ ಜಿಲ್ಲೆಯಲ್ಲೂ ಹೋರಾಟ ಮಾಡಲಿದೆ. ಎರಡು-ಮೂರು ದಿನದಲ್ಲಿ ಗದಗ ಜಿಲ್ಲೆಯಲ್ಲಿಯೂ ರೈತರ ಪರವಾಗಿ ಬೃಹತ್ ಹೋರಾಟ ಹಮ್ಮಿಕೊಳ್ಳಲಾಗುತ್ತದೆ ಎಂದು ತಿಳಿಸಿದರು.




ರಾಜ್ಯದ ಪ್ರತಿಯೊಬ್ಬ ರೈತರಿಗೆ ಕೇಂದ್ರ ಸರಕಾರ ಕೊಟ್ಟಿರುವ ಯೂರಿಯಾ ಗೊಬ್ಬರವನ್ನು ರೈತರ ಅವಶ್ಯಕತೆಗೆ ಅನುಗುಣವಾಗಿ ಕೊಡಿಸುವವರೆಗೆ ಬಿಜೆಪಿ ಕಾರ್ಯಕರ್ತರು ರೈತರ ಬೆನ್ನೆಲುಬಾಗಿ ಕೆಲಸ ಮಾಡಲಿದ್ದಾರೆ. ಕಾಳಸಂತೆಯಲ್ಲಿ ಯೂರಿಯಾ ಗೊಬ್ಬರದ ಮಾರಾಟ ತಡೆದು, ರೈತರ ಪರವಾಗಿ ಬಿಜೆಪಿ ಹೋರಾಟ ರೂಪಿಸಲಿದೆ ಎಂದರು.

> ಜಿಲ್ಲೆಗೆ ಬೇಡಿಕೆಗಿಂತ ಹೆಚ್ಚು ಯೂರಿಯಾ ಗೊಬ್ಬರ ಪೂರೈಕೆಯಾಗಿದೆ ಎಂದು ಕೃಷಿ ಇಲಾಖೆ ಜಂಟಿ ನಿರ್ದೇಶಕರು ಹೇಳುತ್ತಾರೆ. ಆದರೆ ಜಿಲ್ಲೆಯಲ್ಲಿ ಯಾವೊಬ್ಬ ರೈತರಿಗೂ ಸಮರ್ಪಕವಾಗಿ ಯೂರಿಯಾ ಸಿಕ್ಕಿಲ್ಲ. ಪ್ರತಿ ರೈತರಿಗೆ 1-2 ಚೀಲ ಮಾತ್ರ ಗೊಬ್ಬರ ನೀಡಲಾಗುತ್ತಿದೆ. ಯೂರಿಯಾ ಪೂರೈಕೆ ಬಗ್ಗೆ ರೈತರಲ್ಲಿ ಸಾಕಷ್ಟು ಅಸಮಾಧಾನವಿದೆ. ಆದರೂ ಕೃಷಿ ಇಲಾಖೆ ಅಧಿಕಾರಿಗಳು ಮಾತ್ರ ಮೆಕ್ಕೆಜೋಳ ಬಿತ್ತನೆ ಹೆಚ್ಚಾಗಿರುವುದು ಯೂರಿಯಾ ಕೊರತೆಗೆ ಕಾರಣವಾಗಿದೆ ಎನ್ನುತ್ತಿದ್ದಾರೆ.
>
> – ಡಾ. ಚಂದ್ರು ಲಮಾಣಿ.
> ಶಿರಹಟ್ಟಿ ಶಾಸಕರು.

ಬಿಜೆಪಿ ಸರಕಾರ ಅವಧಿಯಲ್ಲಿ ಮಾರ್ಚ್, ಎಪ್ರಿಲ್ ಮತ್ತು ಮೇ ತಿಂಗಳಲ್ಲಿ ಬಫರ್ ಸ್ಟಾಕ್ ಮಾಡುತ್ತಿದ್ದೆವು. ಯೂರಿಯಾ ಉತ್ಪಾದನೆ ಮಾಡುತ್ತಿರುವ ಕಂಪನಿಗಳಿಂದ ಆವರ್ತ ನಿಧಿ ಕೊಟ್ಟು ಎಮರ್ಜೆನ್ಸಿ ಬಫರ್ ಸ್ಟಾಕ್ ಮಾಡುತ್ತಿದ್ದೆವು. ಸಿದ್ದರಾಮಯ್ಯ ಸರಕಾರ 1 ಸಾವಿರ ಕೋಟಿ ರೂ. ಇದ್ದ ಆವರ್ತ ನಿಧಿಯನ್ನು 400 ಕೋಟಿ ರೂ.ಗೆ ಇಳಿಸಿದೆ. ಕೃಷಿ ಇಲಾಖೆ, ಹವಾಮಾನ ಇಲಾಖೆ ಮುನ್ಸೂಚನೆ ನೀಡಿದರೂ ಹೆಚ್ಚಿನ ಯೂರಿಯಾ ಗೊಬ್ಬರಕ್ಕಾಗಿ ಕೇಂದ್ರ ಸರಕಾರಕ್ಕೆ ಬೇಡಿಕೆ ಸಲ್ಲಿಸದೇ ಮೋಸ ಮಾಡಿದೆ. ಸಿದ್ದರಾಮಯ್ಯ ಸರಕಾರದ ಈ ರೈತ ವಿರೋಧಿ ನೀತಿಯನ್ನು ಬಿಜೆಪಿ ರೈತ ಮೋರ್ಚಾ ಖಂಡಿಸಿ ಪ್ರತಿಭಟನೆ ನಡೆಸಿದೆ ಎಂದರು.

ಬಿಜೆಪಿ ಜಿಲ್ಲಾಧ್ಯಕ್ಷ ರಾಜು ಕುರುಡಗಿ ಮಾತನಾಡಿ, ಜಿಲ್ಲೆಯಲ್ಲಿ ಯೂರಿಯಾ ಗೊಬ್ಬರಕ್ಕೆ ರೈತರ ಹಾಹಾಕಾರ ಆರಂಭವಾಗಿದ್ದರೂ ಜಿಲ್ಲೆಯ ಉಸ್ತುವಾರಿ ಸಚಿವ ಎಚ್.ಕೆ. ಪಾಟೀಲರು ಒಮ್ಮೆಯೂ ರೈತರ ಸಮಸ್ಯೆ ಪರಿಹಾರಕ್ಕೆ ಯತ್ನಿಸಿಲ್ಲ. ಕಾನೂನು ಸಚಿವರು ತಮ್ಮ ತವರು ಕ್ಷೇತ್ರದ ರೈತರ ಸಮಸ್ಯೆ ಪರಿಹಾರಕ್ಕೆ ಮುಂದಾಗಬೇಕಿತ್ತು ಎಂದರು.

ಸುದ್ದಿಗೋಷ್ಠಿಯಲ್ಲಿ ಬಿಜೆಪಿ ಪ್ರಧಾನ ಕಾರ್ಯದರ್ಶಿ ಲಿಂಗರಾಜ ಪಾಟೀಲ, ಮುಖಂಡರಾದ ಎಂ.ಎಸ್. ಕರಿಗೌಡ್ರ ಮುಂತಾದವರು ಉಪಸ್ಥಿತರಿದ್ದರು.

# ಯೂರಿಯಾ ಕೃತಕ ಅಭಾವ ಸೃಷ್ಟಿಸಲಾಗಿದೆ

**■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ರಾಜ್ಯ ಸರ್ಕಾರದ ಬೇಡಿಕೆಯಷ್ಟು ಯೂರಿಯಾವನ್ನು ಕೇಂದ್ರ ಸರ್ಕಾರ ಪೂರೈಸಿದೆ. ಕೃಷಿ ಸಚಿವರು, ಕೃಷಿ ಇಲಾಖೆಯ ಅಸಮರ್ಪಕ ನಿರ್ವಹಣೆಯಿಂದ ರಾಜ್ಯದ ದೊಡ್ಡ ದಾಸ್ತಾನುದಾರರಲ್ಲಿ ಯೂರಿಯಾ ಗೊಬ್ಬರ ಸಂಗ್ರಹವಾಗಿದ್ದು, ಕೃತಕ ಅಭಾವ ಸೃಷ್ಟಿಸಿ ಲಾಭದ ಆಸೆಗಾಗಿ ಕಾಳಸಂತೆಯಲ್ಲಿ ಮಾರಾಟ ಮಾಡುತ್ತಿದ್ದಾರೆ ಎಂದು ಮಾಜಿ ಮುಖ್ಯಮಂತ್ರಿ ಹಾಗೂ ಸಂಸದ ಬಸವರಾಜ ಬೊಮ್ಮಾಯಿ ಆರೋಪಿಸಿದರು.



ಅವರು ಭಾನುವಾರ ಗದಗ ಜಿಲ್ಲೆ ಲಕ್ಷ್ಮೇಶ್ವರದ ಎಪಿಎಂಸಿ ಆವರಣದಲ್ಲಿ ನಿರ್ಮಾಣಗೊಂಡ ನೂತನ ಗಣಪತಿ ದೇವಸ್ಥಾನದ ಲೋಕಾರ್ಪಣೆ ಕಾರ್ಯಕ್ರಮದಲ್ಲಿ ಪಾಲ್ಗೊಂಡಿದ್ದ ಸಂದರ್ಭದಲ್ಲಿ ಪತ್ರಕರ್ತರು ಕೇಳಿದ ಪ್ರಶ್ನೆಗೆ ಉತ್ತರಿಸಿ, ರಾಜ್ಯದ ಕೃಷಿ ಸಚಿವರು ಒಂದು ಕಡೆ ಗೊಬ್ಬರ-ಬೀಜದ ಕೊರತೆಯಿಲ್ಲ ಎನ್ನುತ್ತಾರೆ. ಮತ್ತೊಂದು ಕಡೆ ಕೇಂದ್ರದ ಕಡೆ ಬೊಟ್ಟು ಮಾಡಿ ಜವಾಬ್ದಾರಿಯಿಂದ ನುಣುಚಿಕೊಳ್ಳುವ ಪ್ರಯತ್ನ ಮಾಡುತ್ತಾರೆ. ಕೃಷಿ ಇಲಾಖೆಯ ನಿರ್ಲಕ್ಷದಿಂದ ಅದು ಎಲ್ಲ ರೈತರಿಗೆ ಸರಿಯಾಗಿ ಸಿಗುತ್ತಿಲ್ಲ. ಈ ವರ್ಷ ಮೆಕ್ಕೆಜೋಳದ ಬೆಳೆ ಗುರಿಗಿಂತ ದುಪ್ಪಟ್ಟು ಬಿತ್ತನೆಯಾಗಿದೆ. ಉತ್ತಮ ಮಳೆಯೂ ಆಗಿದ್ದರಿಂದ ಯೂರಿಯಾಕ್ಕೆ ಸಾಕಷ್ಟು ಬೇಡಿಕೆ ಉಂಟಾಗಿದೆ. ಈ ಕುರಿತು ಕೇಂದ್ರ ಕೃಷಿ ಸಚಿವರೊಂದಿಗೆ ಚರ್ಚಿಸಿ ಹೆಚ್ಚಿನ ಪ್ರಮಾಣದಲ್ಲಿ ಯೂರಿಯಾ ಗೊಬ್ಬರ ಕಳುಹಿಸಿಕೊಡುವಂತೆ ಮನವಿ ಮಾಡುತ್ತೇನೆ ಎಂದು ಹೇಳಿದರು.

ಈ ವೇಳೆ ಮಾಜಿ ಶಾಸಕ ಜಿ.ಎಂ. ಮಹಾಂತಶೆಟ್ಟರ, ವರ್ತಕರ ಸಂಘದ ಅಧ್ಯಕ್ಷ ಓಂಪ್ರಕಾಶ ಜೈನ್, ಚಂಬಣ್ಣ ಬಾಳಿಕಾಯಿ, ಕುಬೇರಪ್ಪ ಮಹಾಂತಶೆಟ್ಟರ, ಪುಲಕೇಶಿ ಉಪನಾಳ, ಸಂಗಪ್ಪ ಹನಮಸಾಗರ, ಪ್ರಕಾಶ ಉಪನಾಳ, ಗಂಗಾಧರ ಮೆಣಸಿನಕಾಯಿ ಮತ್ತಿತರರಿದ್ದರು.

**ಮಾತೋಶ್ರೀ ಬಸಮ್ಮನವರ ಪುಣ್ಯ ಸ್ಮರಣೆ ನಿಮಿತ್ತ ಸಮಾಜಮುಖಿ ಕಾರ್ಯ**

# ಉಚಿತ ಆರೋಗ್ಯ ಶಿಬಿರ, ಲಸಿಕೆ ವಿತರಣೆ

**■ವಿಜಯಸಾಕ್ಷಿ ಸುದ್ದಿ, ರೋಣ**

ಪಟ್ಟಣದ ಪ್ರತಿಷ್ಠಿತ ಮಾತೋಶ್ರೀ ಬಸಮ್ಮನವರು ಸಂಗನಗೌಡ ಪಾಟೀಲರವರ 21ನೇ ಪುಣ್ಯ ಸ್ಮರಣೆ ನಿಮಿತ್ತ ನಾಗರಿಕ ಸಮಾಜಕ್ಕೆ ಉಪಯುಕ್ತವಾಗುವ, ಸಮಾಜಮುಖಿ ಕಾರ್ಯಗಳು ನಡೆಯಲಿವೆ ಎಂದು ಸ್ಮರಣೋತ್ಸವ ಸಮಿತಿ ಪ್ರಧಾನ ಕಾರ್ಯದರ್ಶಿ ವಿ.ಬಿ. ಸೋಮನಕಟ್ಟಿಮಠ ಹೇಳಿದರು.

ಅವರು ರವಿವಾರ ಆರ್‌ಜಿಎಸ್ ಶಿಕ್ಷಣ ಸಂಸ್ಥೆಯ ಸಭಾಂಗಣದಲ್ಲಿ ಸುದ್ದಿಗೋಷ್ಠಿ ನಡೆಸಿ ಮಾತನಾಡಿದರು.

ಮಾತೋಶ್ರೀ ಬಸಮ್ಮನವರ ಪುಣ್ಯ ಸ್ಮರಣೆ ನಿಮಿತ್ತ ಹಮ್ಮಿಕೊಳ್ಳುವ ಉಚಿತ ನೇತ್ರ ತಪಾಸಣೆಯಿಂದ 2700 ಜನರಿಗೆ ಅನುಕೂಲವಾಗಿದೆ. ಜುಲೈ 29ರಂದು ಬೆಳಿಗ್ಗೆ 10ಕ್ಕೆ ಗಜೇಂದ್ರಗಡ ಪಟ್ಟಣದ ಕುಷ್ಟಗಿ ರಸ್ತೆ ಬಳಿಯಿರುವ ಸಾಯಿದತ್ತ ಮಲ್ಟಿ ಸ್ಪೆಷಾಲಿಟಿ ಆಸ್ಪತ್ರೆಯಲ್ಲಿ ಉಚಿತ ಹೃದಯ ತಪಾಸಣೆ ಶಿಬಿರ ಜರುಗಲಿದ್ದು, ಹೃದಯ ಸಂಬಂಧಿ ಕಾಯಿಲೆ ಹೊಂದಿರುವವರು ಈ ಶಿಬಿರದಲ್ಲಿ ಭಾಗಿಯಾಗಬೇಕು. ಸಂಜೆ 6ಕ್ಕೆ ಗಜೇಂದ್ರಗಡ ಪಟ್ಟಣದ ಕೆ.ಜಿ. ಬಂಡಿ ಗಾರ್ಡನ್‌ನಲ್ಲಿ ಸರ್ವಧರ್ಮ ಗೋಷ್ಠಿ ಏರ್ಪಡಿಸಲಾಗಿದ್ದು, ಸಾರ್ವಜನಿಕರು ಕಾರ್ಯಕ್ರಮದಲ್ಲಿ ಭಾಗವಹಿಸಬೇಕೆಂದು ವಿನಂತಿಸಿದರು.




ಜುಲೈ 30ರಂದು ಬೆಳಿಗ್ಗೆ 10ಕ್ಕೆ ಆರ್‌ಜಿಎಸ್ ಆಸ್ಪತ್ರೆಯಲ್ಲಿ 9ರಿಂದ 14 ಹಾಗೂ 14ರಿಂದ 18 ವರ್ಷದ ಹೆಣ್ಣು ಮಕ್ಕಳಿಗೆ ಗರ್ಭಾಶಯ ಹಾಗೂ ವಿವಿಧ ಕ್ಯಾನ್ಸರ್‌ಗಳನ್ನು ತಡೆಗಟ್ಟುವ ಹೆಚ್‌ಪಿವಿ ಲಸಿಕೆಯನ್ನು ಉಚಿತವಾಗಿ ನೀಡಲಾಗುವುದು. ಜುಲೈ 31ರಂದು ಸಂಜೆ 6ಕ್ಕೆ ನರೆಗಲ್ಲ ಪಟ್ಟಣದ ರೇಣುಕಾಚಾರ್ಯ ಶಾಲಾ ಆವರಣದಲ್ಲಿ ಮಹಿಳಾ ಗೋಷ್ಠಿ ನಡೆಯಲಿದೆ ಎಂದು ತಿಳಿಸಿದರು.

> ಆಗಸ್ಟ್ 1ರಂದು ಮಾತೋಶ್ರೀಯವರ 21ನೇ ಪುಣ್ಯ ಸ್ಮರಣೆ ಕಾರ್ಯಕ್ರಮ ಜಕ್ಕಲಿ ರಸ್ತೆಯಲ್ಲಿರುವ ಸಮಾಧಿ ಬಳಿ ನಡೆಯಲಿದ್ದು, ನಂತರ ರಾಜೀವಗಾಂಧಿ ಶಿಕ್ಷಣ ಸಂಸ್ಥೆಯ ಆವರಣದಲ್ಲಿ ಜರುಗುವ ಸಭೆಯಲ್ಲಿ ಕರ್ನಾಟಕ ಸರಕಾರದ ನಿವೃತ್ತ ಮುಖ್ಯಕಾರ್ಯದರ್ಶಿಗಳು, ಬಿಬಿಎಂಪಿ ಕ್ಷೇತ್ರ ವಿಂಗಡನೆ ಅಧ್ಯಕ್ಷರು, ನಾಡಪ್ರಭು ಕೆಂಪೇಗೌಡ ಪ್ರಶಸ್ತಿ ಪುರಸ್ಕೃತರಾದ ಬಿ.ಎಸ್. ಪಾಟೀಲರಿಗೆ ಸ್ಮರಣೋತ್ಸವ ಸಮಿತಿಯಿಂದ ಸನ್ಮಾನ ಕಾರ್ಯ ನಡೆಯಲಿದೆ ಎಂದು ವಿ.ಬಿ. ಸೋಮನಕಟ್ಟಿಮಠ ತಿಳಿಸಿದರು.

ಈ ಸಂದರ್ಭದಲ್ಲಿ ವಿವಿಧ ಮಠಾಧೀಶರು, ಶಾಸಕರು, ಮಾಜಿ ಶಾಸಕರು ಸೇರಿದಂತೆ ಹಲವು ಗಣ್ಯರು ಉಪಸ್ಥಿತರಿರುವರು ಎಂದರು.

ಪತ್ರಿಕಾಗೋಷ್ಠಿಯಲ್ಲಿ ವೀರಭದ್ರಗೌಡ ಪಾಟೀಲ, ಬಸವರಾಜ ನವಲಗುಂದ, ರವಿ ಸಂಗನಬಸಶೆಟ್ಟರ, ಸಿದ್ದಣ್ಣ ನವಲಗುಂದ, ಡಾ. ಐ.ಬಿ. ಕೊಟ್ಟೂರಶೆಟ್ಟರ, ಡಾ. ಅಂಗಡಿ ಸೇರಿದಂತೆ ಸಮಿತಿ ಸದಸ್ಯರು ಉಪಸ್ಥಿತರಿದ್ದರು.

# ಗೊಬ್ಬರಕ್ಕಾಗಿ ರೈತರಿಂದ ರಸ್ತೆ ತಡೆ



**■ವಿಜಯಸಾಕ್ಷಿ ಸುದ್ದಿ, ಹರಪನಹಳ್ಳಿ**

ಯೂರಿಯಾ ರಸಗೊಬ್ಬರಕ್ಕಾಗಿ ರೈತರು ಮುಗಿಬಿದ್ದು ಗದ್ದಲ, ಗಲಾಟೆ ಮಾಡಿದ್ದು, ಹಬ್ಬವನ್ನು ಲೆಕ್ಕಿಸದೆ ಸೋಮವಾರ ಯೂರಿಯಾ ಗೊಬ್ಬರ ಪಡೆಯಲು ರೈತರು ಪಟ್ಟಣದ ತೆಗ್ಗಿನ ಮಠದ ಮುಂಭಾಗದಲ್ಲಿ ರಸ್ತೆ ತಡೆದು ಪ್ರತಿಭಟನೆ ನಡೆಸಿದರು.

ಅಗತ್ಯ ಯೂರಿಯಾ ರಸಗೊಬ್ಬರ ಸಿಗದ ಪರಿಣಾಮ ಬೆಳಿಗ್ಗೆಯಿಂದಲೇ ರೈತರು ಪಟ್ಟಣದ ತೆಗ್ಗಿನ ಮಠ ಪಕ್ಕದ ವೀರಭದ್ರೇಶ್ವರ ಆಗ್ರೋ ಕೇಂದ್ರದ ಮುಂದೆ ಜಮಾಯಿಸಿದ್ದರು. ಸೋಮವಾರ ಬೆಳಿಗ್ಗೆ ಗೊಬ್ಬರ ನೀಡುತ್ತೇವೆಂದು ಹೇಳಿದ್ದಕ್ಕೆ ಬೆಳಿಗ್ಗೆ 6 ಗಂಟೆಯಿಂದ ಅಂಗಡಿ ಮುಂಭಾಗದಲ್ಲಿ ಕಾದು ಕುಳಿತಿದ್ದೇವೆ. ಆದರೆ ಅಂಗಡಿ ಮಾಲೀಕರು ಅಂಗಡಿ ತೆರೆದು ಗೊಬ್ಬರ ನೀಡದೆ ನಿರ್ಲಕ್ಷ್ಯ ಮಾಡುತ್ತಿದ್ದಾರೆ ಎಂದು ಆಕ್ರೋಶ ವ್ಯಕ್ತಪಡಿಸಿ ರಸ್ತೆಗೆ ಪೊಲೀಸ್ ಬ್ಯಾರಿಕೇಡರ್‌ಗಳನ್ನು ಅಡ್ಡಗಟ್ಟಿ ಕೆಲ ಸಮಯ ವಾಹನಗಳ ಸಂಚಾರಕ್ಕೆ ಅಡ್ಡಿಪಡಿಸಿದರು.

ಕೂಡಲೆ ಪೊಲೀಸ್ ಸಿಬ್ಬಂದಿ ಸ್ಥಳಕ್ಕೆ ಆಗಮಿಸಿ ರೈತರ ಆಕ್ರೋಶವನ್ನು ತಿಳಿಗೊಳಿಸಲು ಪ್ರಯತ್ನಿಸಿದರು. ನಂತರ ಸ್ಥಳಕ್ಕೆ ಕೃಷಿ ಸಹಾಯಕ ನಿರ್ದೇಶಕ ವಿ.ಸಿ. ಉಮೇಶ್ ಆಗಮಿಸಿ ಈಗಾಗಲೇ ವೀರಭದ್ರೇಶ್ವರ ಆಗ್ರೋ ಕೇಂದ್ರಕ್ಕೆ 45 ಮೆಟ್ರಿಕ್ ಟನ್ ಗೊಬ್ಬರ ಬಂದಿದ್ದು, ರೈತರು ಸಹಕರಿಸಿ ಬಂದಿರುವ ಗೊಬ್ಬರವನ್ನು ಸಾಲುಗಟ್ಟಿ ಪಡೆಯಲು ಮನವಿ ಮಾಡಿಕೊಂಡರು.

# ಕಾಶೀ ವಿಶ್ವನಾಥನ ಜಾತ್ರಾ ಮಹೋತ್ಸವ ಸರ್ವ ಧರ್ಮಿಯರ ಸಾಮೂಹಿಕ ವಿವಾಹ

**■ವಿಜಯಸಾಕ್ಷಿ ಸುದ್ದಿ, ಗದಗ**

ಗದುಗಿನ ಕಾಶೀ ವಿಶ್ವನಾಥ ನಗರ (ಬುಳ್ಳಾ ಪ್ಲಾಟ್)ದ ಕಾಶೀ ವಿಶ್ವನಾಥ ಜಾತ್ರಾ ಮಹೋತ್ಸವ ಹಾಗೂ ಶ್ರೀ ದುರ್ಗಾದೇವಿಗೆ ಉಡಿ ತುಂಬುವ ಧಾರ್ಮಿಕ ಕಾರ್ಯಕ್ರಮದ ಅಂಗವಾಗಿ ಆಗಸ್ಟ್ 22ರಂದು ಸರ್ವ ಧರ್ಮದವರಿಗಾಗಿ ಉಚಿತ ಸಾಮೂಹಿಕ ವಿವಾಹ ಹಮ್ಮಿಕೊಳ್ಳಲಾಗಿದೆ.

ತಮ್ಮ ಮಕ್ಕಳ ಮದುವೆ ಮಾಡಲಿಚ್ಛಿಸುವ ಪಾಲಕ-ಪೋಷಕರು ಮದುವೆಯ ವಯೋಮಿತಿಯ ವಧು-ವರರ ಅಗತ್ಯ ದಾಖಲೆಗಳೊಂದಿಗೆ ಆಗಸ್ಟ್ 15ರೊಳಗೆ ವಧು-ವರರ ಹೆಸರುಗಳನ್ನು ಕಾಶೀ ವಿಶ್ವನಾಥ ದೇವಸ್ಥಾನದ ಎದುರಿಗೆ ಇರುವ ಹಿರಿಯರಾದ ದೇವಪ್ಪ ಮಳಗಿ-ಮೊಬೈಲ್ ನಂ: 9844474736 ಇವರಲ್ಲಿ ನೋಂದಾಯಿಸಬೇಕೆಂದು ಸಂಘಟಿಕರಾದ ಬಿ.ಬಿ. ಅಸೂಟಿ ಪತ್ರಿಕಾ ಪ್ರಕಟಣೆಯ ಮೂಲಕ ತಿಳಿಸಿದ್ದಾರೆ.

# ಜಿ.ಪಂ ಸಿ.ಇ.ಓ ಭರತ್‌ರಿಂದ ಜೆಜೆಎಂ ಕಾಮಗಾರಿಗಳ ಪರಿಶೀಲನೆ



**■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಜಲಜೀವನ್ ಮಿಷನ್ ಯೋಜನೆಯಡಿ ತಾಲೂಕಿನ ಗೋಜನೂರು, ಬಟ್ಟೂರು ಗ್ರಾಮ ಪಂಚಾಯಿತಿ ವ್ಯಾಪ್ತಿಯ ಕುಂದ್ರಳ್ಳಿ, ಶಿಗ್ಲಿ, ದೊಡ್ಡೂರು ಗ್ರಾ.ಪಂ ವ್ಯಾಪ್ತಿಯ ಶ್ಯಾಬಳ, ದೊಡ್ಡೂರು ತಾಂಡ ಗ್ರಾಮಗಳಿಗೆ ಜಿಲ್ಲಾ ಪಂಚಾಯಿತಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಭರತ್ ಎಸ್ ಭೇಟಿ ನೀಡಿ ಜೆಜೆಎಂ ಕಾಮಗಾರಿ ವೀಕ್ಷಣೆ ಮಾಡಿದರು. ಈ ವೇಳೆ ಜೆಜೆಎಂ ಯೋಜನೆಯಡಿ ಮನೆ ಮನೆಗೆ ಸಂಪರ್ಕಿಸುವ ನೀರು ಸರಬರಾಜು ವ್ಯವಸ್ಥೆಯನ್ನು ಪರಿಶೀಲಿಸಿ ನೀರಿನ ಸಂಪರ್ಕ ಕಡಿತಗೊಂಡಿರುವ ಗ್ರಾಮಗಳಲ್ಲಿ ಪುನಃ ನೀರಿನ ವ್ಯವಸ್ಥೆಯನ್ನು ಕಲ್ಪಿಸುವಂತೆ ಜೆಜೆಎಂ ಸರಬರಾಜುದಾರರಿಗೆ ಸೂಚಿಸಿದರು. ಶಿಗ್ಲಿ ಸರ್ಕಾರಿ ಹೆಣ್ಣು ಮಕ್ಕಳ ಶಾಲೆಗೆ ಭೇಟಿ ನೀಡಿ ವಿದ್ಯಾರ್ಥಿಗಳ ಶೈಕ್ಷಣಿಕ ಪ್ರಗತಿ, ಕುಡಿಯುವ ನೀರು, ಊಟದ ವ್ಯವಸ್ಥೆ ಪರಿಶೀಲಿಸಿ ಶಾಲೆಯ ಬಗ್ಗೆ ಮೆಚ್ಚುಗೆ ವ್ಯಕ್ತಪಡಿಸಿದರು.

ಎಲ್ಲಾ ಗ್ರಾಮಗಳಲ್ಲಿಯ ಗ್ರಾಮಸ್ಥರೊಂದಿಗೆ ಮಾತನಾಡಿ, ಮೂಲಭೂತ ಸೌಕರ್ಯಗಳ ಕುರಿತು ಮಾಹಿತಿ ಪಡೆದರು. ಈ ವೇಳೆ ಕಾರ್ಯನಿರ್ವಾಹಕ ಅಧಿಕಾರಿಗಳಾದ ಧರ್ಮರ ಕೃಷ್ಣಪ್ಪ, ಸಹಾಯಕ ಕಾರ್ಯನಿರ್ವಾಹಕ ಅಭಿಯಂತರ ಮಲ್ಲಿಕಾರ್ಜುನ್, ಪಿಡಿಓ ಶಿವಕುಮಾರ್ ವಾಲಿ, ಎಸ್.ಎಫ್. ಮಾಳವಾಡ, ಎಂ. ಮಾದರ್, ಕಾರ್ಯದರ್ಶಿ ಕವಿತಾ ಅಣ್ಣಿಗೇರಿ, ಟಿಐಇಸಿ ಮಂಜುನಾಥ ಸ್ವಾಮಿ, ಟಿಎಎ ಶ್ರೀನಿವಾಸ್ ಕಲಾಲ್, ಶ್ರೀಧರ ಕುಲಕರ್ಣಿ, ಆರ್‌ಡಬ್ಲುಎಸ್ ಅಧಿಕಾರಿಗಳು, ಗ್ರಾ.ಪಂ ಅಧ್ಯಕ್ಷರು, ಸದಸ್ಯರು, ಗ್ರಾ.ಪಂ ಸಿಬ್ಬಂದಿಗಳು ಉಪಸ್ಥಿತರಿದ್ದರು.

# ಗದಗ ಗ್ರಾಮೀಣ ಪೊಲೀಸರ ಬಲೆಗೆ ಬಿದ್ದ ಇಬ್ಬರು 'ಟಗರು ಕಳ್ಳರು'!



**■ವಿಜಯಸಾಕ್ಷಿ ಸುದ್ದಿ, ಗದಗ**

ಜಿಲ್ಲೆಯಲ್ಲಿ ಹೆಚ್ಚು ಆ್ಯಕ್ಟೀವ್ ಆಗಿದ್ದ ಇಬ್ಬರು ಟಗರು ಕಳ್ಳರನ್ನು ಬಂಧಿಸುವಲ್ಲಿ ಗದಗ ಗ್ರಾಮೀಣ ಪೊಲೀಸರು ಯಶಸ್ವಿಯಾಗಿದ್ದಾರೆ.


ಎಸ್, ಇತ್ತೀಚಿನ ದಿನಗಳಲ್ಲಿ ಜಿಲ್ಲೆಯಾದ್ಯಂತ ಕಳ್ಳತನ ಪ್ರಕರಣಗಳು ಹೆಚ್ಚಾಗಿದ್ದವು. ಇದರಿಂದ ಸಾರ್ವಜನಿಕರು ಭಯಭೀತರಾಗಿದ್ದರು. ಇದೀಗ ಗದಗ ಪೊಲೀಸರು ಭರ್ಜರಿ ಕಾರ್ಯಾಚರಣೆ ಮಾಡುವ ಮೂಲಕ ಕಳ್ಳರನ್ನು ಬಂಧಿಸುವಲ್ಲಿ ಯಶಸ್ವಿಯಾಗಿದ್ದಾರೆ.

ಹುಲಕೋಟಿ ಗ್ರಾಮದಲ್ಲಿ ಜುಲೈ 2 ರಂದು ಮನೆ ಮುಂದೆ ಕಟ್ಟಿದ್ದ 5 ಟಗರು ಕಳ್ಳತನವಾಗಿದ್ದವು. ಈ ಬಗ್ಗೆ ಮಾಲೀಕ ಗಿರಿಯಪ್ಪ ಅಳವಂಡಿ ಅವರು ಗ್ರಾಮೀಣ ಪೊಲೀಸರಿಗೆ ದೂರು ನೀಡಿದ್ದರು. ದೂರು ದಾಖಲಿಸಿಕೊಂಡ ಗ್ರಾಮೀಣ ಪೊಲೀಸರು, ಇದೀಗ ಆರೋಪಿಗಳನ್ನು ಪತ್ತೆ ಹಚ್ಚುವಲ್ಲಿ ಯಶಸ್ವಿಯಾಗಿದ್ದಾರೆ.

ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ರೋಹನ್ ಜಗದೀಶ್, ಸಿ.ಇ.ಎನ್ ಹೆಚ್ಚುವರಿ ಪ್ರಭಾರಿ ಡಿಎಸ್ಪಿ ಮಹಾಂತೇಶ್ ಸಜ್ಜನ ಹಾಗೂ ಗದಗ ಉಪ ವಿಭಾಗದ ಡಿವೈ ಎಸ್ಪಿ ಮುರ್ತುಜಾ ಖಾದ್ರಿ ಅವರ ನಿರ್ದೇಶನದಂತೆ ಅಖಾಡಕ್ಕೆ ಇಳಿದ ಗ್ರಾಮೀಣ ಠಾಣೆಯ ಪೊಲೀಸ್ ಇನ್ಸ್‌ಪೆಕ್ಟರ್ ಸಿದ್ದರಾಮೇಶ್ವರ ಗಡೇದ ನೇತೃತ್ವದ ತಂಡ ಮೂವರು ಕಳ್ಳರನ್ನು ಲಾಕ್ ಮಾಡುವಲ್ಲಿ ಯಶಸ್ವಿಯಾಗಿದೆ. ಅಲ್ಲದೇ ಬಂಧಿತರಿಂದ 3 ಲಕ್ಷ 85 ಸಾವಿರ ರೂಪಾಯಿ ಮೌಲ್ಯದ 25 ಟಗರುಗಳನ್ನು ವಶಕ್ಕೆ ಪಡೆದಿದ್ದಾರೆ.

ಹಲವು ಆಯಾಮಗಳ ಮೂಲಕ ಹಾಗೂ ವೈಜ್ಞಾನಿಕ ವಿಧಾನಗಳ ಮೂಲಕ ಮಾಹಿತಿ ಕಲೆ ಹಾಕಿ ಆರೋಪಿಗಳನ್ನು ಪತ್ತೆ ಹಚ್ಚಿದ ಸಿದ್ದರಾಮೇಶ್ವರ ಗಡೇದ, ಎಸ್ ಬಿ ಕವಲೂರ, ಪ್ರಕಾಶ್ ಗಾಣಿಗೇರ, ಬಸವರಾಜ್ ಗುಡ್ಲಾನೂರ, ಹೇಮಂತ ಪರಸಣ್ಣನವರ, ಅಶೋಕ ಬೂದಿಹಾಳ, ಅನಿಲ ಬನ್ನಿಕೊಪ್ಪ, ಕೋಟೆಪ್ಪ ಒಡೆಯರ, ಪ್ರವೀಣ ಶಾಂತಪ್ಪನವರ ಹಾಗೂ ಜಿಲ್ಲಾ ಪೊಲೀಸ್ ಕಚೇರಿಯ ತಾಂತ್ರಿಕ ಸಿಬ್ಬಂದಿ ಗುರು ಬೂದಿಹಾಳ, ಸಂಜೀವ ಕೊರಡೂರ ಇವರಿಗೆ ಪೊಲೀಸ್ ವರಿಷ್ಠಾಧಿಕಾರಿ ರೋಹನ್ ಜಗದೀಶ್ ಪ್ರಶಂಸೆ ವ್ಯಕ್ತಪಡಿಸಿ ಬಹುಮಾನ ಘೋಷಿಸಿದ್ದಾರೆ.

# ಹುಬ್ಬಳ್ಳಿ| ರಸ್ತೆಬದಿ ನಿಂತಿದ್ದ ಎಲೆಕ್ಟ್ರಿಕಲ್ ಬೈಕ್ ಬೆಂಕಿಗಾಹುತಿ!



**■ವಿಜಯಸಾಕ್ಷಿ ಸುದ್ದಿ, ಹುಬ್ಬಳ್ಳಿ**

ರಸ್ತೆಬದಿ ನಿಂತಿದ್ದ ಎಲೆಕ್ಟ್ರಿಕಲ್ ಬೈಕ್ ಬೆಂಕಿಗಾಹುತಿಯಾಗಿರುವ ಘಟನೆ ಹುಬ್ಬಳ್ಳಿಯ ಕೇಶವಕುಂಜದ ಸಮೀಪದಲ್ಲಿ ಜರುಗಿದೆ.

ಶಾರ್ಟ್ ಸರ್ಕ್ಯೂಟ್ ನಿಂದ ಅಗ್ನಿ ಅವಘಡ ಸಂಭವಿಸಿರಬಹುದು ಎಂಬ ಶಂಕೆ ವ್ಯಕ್ತವಾಗಿದೆ. ಓಲಾ ಕಂಪನಿಯ ಎಲೆಕ್ಟ್ರಿಕ್ ಬೈಕ್ ಏಕಾಏಕಿ ಹೊತ್ತಿ ಉರಿದ ಪರಿಣಾಮ ಸಾರ್ವಜನಿಕರ ಆತಂಕಕ್ಕೆ ಕಾರಣವಾಗಿದೆ. ಇನ್ನೂ ಘಟನೆಯಲ್ಲಿ ಎಲೆಕ್ಟ್ರಿಕಲ್ ಬೈಕ್ ಸಂಪೂರ್ಣ ಸುಟ್ಟು ಕರಕಲಾಗಿದ್ದು, ಸ್ಥಳೀಯರು ಬೆಂಕಿ ನಂದಿಸಲು ಹರಸಾಹಸ ಪಡುತ್ತಿದ್ದಾರೆ.

ಅಲ್ಲದೇ ಎಲೆಕ್ಟ್ರಿಕಲ್ ಬೈಕ್ ಮಳೆಗಾಲದಲ್ಲಿ ಎಷ್ಟು ಸೇಫ್ ಎಂದು ಜನರು ತಮ್ಮಷ್ಟಕ್ಕೇ ತಾವೇ ಮಾತನಾಡಿಕೊಳ್ಳುತ್ತಿದ್ದು, ಬೈಕ್ ಸವಾರರಲ್ಲಿ ಆತಂಕ ಮನೆ ಮಾಡಿದೆ.


# ಗದಗ ಗ್ರಾಮೀಣ ಪೊಲೀಸರ ಬಲೆಗೆ ಬಿದ್ದ ಇಬ್ಬರು 'ಟಗರು ಕಳ್ಳರು'!

**■ವಿಜಯಸಾಕ್ಷಿ ಸುದ್ದಿ, ಗದಗ**

ಜಿಲ್ಲೆಯಲ್ಲಿ ಹೆಚ್ಚು ಆ್ಯಕ್ಟೀವ್ ಆಗಿದ್ದ ಇಬ್ಬರು ಟಗರು ಕಳ್ಳರನ್ನು ಬಂಧಿಸುವಲ್ಲಿ ಗದಗ ಗ್ರಾಮೀಣ ಪೊಲೀಸರು ಯಶಸ್ವಿಯಾಗಿದ್ದಾರೆ.

ಎಸ್, ಇತ್ತೀಚಿನ ದಿನಗಳಲ್ಲಿ ಜಿಲ್ಲೆಯಾದ್ಯಂತ ಕಳ್ಳತನ ಪ್ರಕರಣಗಳು ಹೆಚ್ಚಾಗಿದ್ದವು. ಇದರಿಂದ ಸಾರ್ವಜನಿಕರು ಭಯಭೀತರಾಗಿದ್ದರು. ಇದೀಗ ಗದಗ ಪೊಲೀಸರು ಭರ್ಜರಿ ಕಾರ್ಯಾಚರಣೆ ಮಾಡುವ ಮೂಲಕ ಕಳ್ಳರನ್ನು ಬಂಧಿಸುವಲ್ಲಿ ಯಶಸ್ವಿಯಾಗಿದ್ದಾರೆ.

ಬಂಧಿತರನ್ನು ಗದಗ ಜಿಲ್ಲೆಯ ಮುಂಡರಗಿ ತಾಲೂಕಿನ ಬೆಣ್ಣೆಹಳ್ಳಿಯ ಸೆಂಟ್ರಿಂಗ್ ಕೆಲಸಗಾರ ಆಕಾಶ್ ಫಕ್ಕೀರಪ್ಪ ಭಜಂತ್ರಿ ಹಾಗೂ ಗದಗ ತಾಲೂಕಿನ ಕಳಸಾಪೂರದ ಆಟೋ ಡ್ರೈವರ್ ಶಿವರಾಜ್ ಚಂದ್ರಪ್ಪ ಭಜಂತ್ರಿ ಎಂದು ಗುರುತಿಸಲಾಗಿದೆ.

ಹುಲಕೋಟಿ ಗ್ರಾಮದಲ್ಲಿ ಜುಲೈ 2 ರಂದು ಮನೆ ಮುಂದೆ ಕಟ್ಟಿದ್ದ 5 ಟಗರು ಕಳ್ಳತನವಾಗಿದ್ದವು. ಈ ಬಗ್ಗೆ ಮಾಲೀಕ ಗಿರಿಯಪ್ಪ ಅಳವಂಡಿ ಅವರು ಗ್ರಾಮೀಣ ಪೊಲೀಸರಿಗೆ ದೂರು ನೀಡಿದ್ದರು. ದೂರು ದಾಖಲಿಸಿಕೊಂಡ ಗ್ರಾಮೀಣ ಪೊಲೀಸರು, ಇದೀಗ ಆರೋಪಿಗಳನ್ನು ಪತ್ತೆ ಹಚ್ಚುವಲ್ಲಿ ಯಶಸ್ವಿಯಾಗಿದ್ದಾರೆ.

ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ರೋಹನ್ ಜಗದೀಶ್, ಸಿ.ಇ.ಎನ್ ಹೆಚ್ಚುವರಿ ಪ್ರಭಾರಿ ಡಿಎಸ್ಪಿ ಮಹಾಂತೇಶ್ ಸಜ್ಜನ ಹಾಗೂ ಗದಗ ಉಪ ವಿಭಾಗದ ಡಿವೈ ಎಸ್ಪಿ ಮುರ್ತುಜಾ ಖಾದ್ರಿ ಅವರ ನಿರ್ದೇಶನದಂತೆ ಅಖಾಡಕ್ಕೆ ಇಳಿದ ಗ್ರಾಮೀಣ ಠಾಣೆಯ ಪೊಲೀಸ್ ಇನ್ಸ್‌ಪೆಕ್ಟರ್ ಸಿದ್ದರಾಮೇಶ್ವರ ಗಡೇದ ನೇತೃತ್ವದ ತಂಡ ಮೂವರು ಕಳ್ಳರನ್ನು ಲಾಕ್ ಮಾಡುವಲ್ಲಿ ಯಶಸ್ವಿಯಾಗಿದೆ. ಅಲ್ಲದೇ ಬಂಧಿತರಿಂದ 3 ಲಕ್ಷ 85 ಸಾವಿರ ರೂಪಾಯಿ ಮೌಲ್ಯದ 25 ಟಗರುಗಳನ್ನು ವಶಕ್ಕೆ ಪಡೆದಿದ್ದಾರೆ.

ಹಲವು ಆಯಾಮಗಳ ಮೂಲಕ ಹಾಗೂ ವೈಜ್ಞಾನಿಕ ವಿಧಾನಗಳ ಮೂಲಕ ಮಾಹಿತಿ ಕಲೆ ಹಾಕಿ ಆರೋಪಿಗಳನ್ನು ಪತ್ತೆ ಹಚ್ಚಿದ ಸಿದ್ದರಾಮೇಶ್ವರ ಗಡೇದ, ಎಸ್ ಬಿ ಕವಲೂರ, ಪ್ರಕಾಶ್ ಗಾಣಿಗೇರ, ಬಸವರಾಜ್ ಗುಡ್ಲಾನೂರ, ಹೇಮಂತ ಪರಸಣ್ಣನವರ, ಅಶೋಕ ಬೂದಿಹಾಳ, ಅನಿಲ ಬನ್ನಿಕೊಪ್ಪ, ಕೋಟೆಪ್ಪ ಒಡೆಯರ, ಪ್ರವೀಣ ಶಾಂತಪ್ಪನವರ ಹಾಗೂ ಜಿಲ್ಲಾ ಪೊಲೀಸ್ ಕಚೇರಿಯ ತಾಂತ್ರಿಕ ಸಿಬ್ಬಂದಿ ಗುರು ಬೂದಿಹಾಳ, ಸಂಜೀವ ಕೊರಡೂರ ಇವರಿಗೆ ಪೊಲೀಸ್ ವರಿಷ್ಠಾಧಿಕಾರಿ ರೋಹನ್ ಜಗದೀಶ್ ಪ್ರಶಂಸೆ ವ್ಯಕ್ತಪಡಿಸಿ ಬಹುಮಾನ ಘೋಷಿಸಿದ್ದಾರೆ.


VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka